ಕನ್ನಡ ದಿನಪತ್ರಿಕೆ
17 ಫೆಬ್ರುವರಿ | ಶನಿವಾರ
17 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 | ಸಂಪುಟ – 5 ಸಂಚಿಕೆ – 01 ಪುಟ – 4 | RNI : KARKAN/2020/79084 | ADVT EMAIL: BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

# ಸಿದ್ದು ಬಜೆಟ್ ಲೆಕ್ಕ




ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸಭೆಯಲ್ಲಿ ಕಾಂಗ್ರೆಸ್ ಸರ್ಕಾರದ 2ನೇ ಅವಧಿಯ ಬಜೆಟ್ ಮಂಡಿಸಿದ್ದಾರೆ. 3,71,383 ಕೋಟಿ ರೂಪಾಯಿ ಗಾತ್ರದ ಬಜೆಟ್ ಮೂಲಕ ಹಲವು ಹೊಸ ಯೋಜನೆಗಳನ್ನು ಘೋಷಿಸಿದರು. ಗ್ಯಾರಂಟಿ ಯೋಜನೆಗಳೊಂದಿಗೆ ಉದ್ಯೋಗ ಸೃಜನ, ಶಿಕ್ಷಣ, ಆರೋಗ್ಯ, ಹಸಿವು ನಿವಾರಣೆ, ಕೃಷಿ ಮತ್ತು ನೀರಾವರಿಗೆ ಪ್ರೋತ್ಸಾಹ, ಮೂಲ ಸೌಕರ್ಯ ಸೇರಿದಂತೆ ವಿವಿಧ ವಲಯಗಳ ಅಭಿವೃದ್ಧಿಗೆ ಬಜೆಟ್ ನಲ್ಲಿ ಹೊಸ ಯೋಜನೆಗಳನ್ನು ಘೋಷಿಸಿದ್ದಾರೆ.

ಬಿಯರ್ ಮೇಲಿನ ಅಬಕಾರಿ ಶುಲ್ಕ ಹೆಚ್ಚಳ ಹೊರತುಪಡಿಸಿ, ಉಳಿದಂತೆ ಯಾವುದೇ ತೆರಿಗೆ ಹೊರೆಯನ್ನು ಜನಸಾಮಾನ್ಯರ ಮೇಲೆ ಹೇರಿಲ್ಲ. ಬಜೆಟ್ ನ ಪ್ರಮುಖ ಅಂಶಗಳೆಂದರೆ ಗ್ಯಾರಂಟಿ ಯೋಜನೆಗಳಿಗೆ 52 ಸಾವಿರ ಕೋಟಿ ರೂ. ಮೀಸಲು. ರಾಜ್ಯಾದ್ಯಂತ ಮಹಿಳೆಯರೇ ನಡೆಸುವ 50 ಹೋಟೆಲ್ ಕೆಫೆ ನಿರ್ಮಾಣ. ಸಿಎಂ ಸಿದ್ದು ಪ್ರತಿನಿಧಿಸುವ ವರುಣಾ ಕ್ಷೇತ್ರಕ್ಕೆ 2 ಸಾವಿರ ಕೋಟಿ ರೂ. ಮೀಸಲು. ರಾಜ್ಯದ ಆಯ್ದ ಜಿಲ್ಲೆಗಳಲ್ಲಿ ಕಿಸಾನ್ ಮಾಲ್ ಸ್ಥಾಪನೆ.

ಮಾಜಿ ಸಿಎಂ ಎಸ್. ಬಂಗಾರಪ್ಪ ಸ್ಮಾರಕ ನಿರ್ಮಾಣ ಘೋಷಣೆ.

ವಿಜಯಪುರದಲ್ಲಿ ತೋಟಗಾರಿಕಾ ಕಾಲೇಜು. ಸಮಗ್ರ ಕೃಷಿ ಉತ್ತೇಜಿಸುವ ಕರ್ನಾಟಕ ರೈತ ಸಮೃದ್ಧಿ ಯೋಜನೆ. ಸಿರಿಧಾನ್ಯಗಳಿಗಾಗಿ 'ನಮ್ಮ ಮಿಲ್ಲೆಟ್' ಹೊಸ ಯೋಜನೆ ಪ್ರಾರಂಭ. ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್ ಫೋನ್. 80 ವರ್ಷ ದಾಟಿದ ವೃದ್ಧ–ರಿಗೆ ಆಹಾರ ಒದಗಿಸಲು 'ಅನ್ನ ಸುವಿಧಾ' ಯೋಜನೆ. ಬೆಂಗಳೂರು ಟ್ರಾಫಿಕ್ ಜಾಮ್‌ಗೆ ಸುರಂಗ ಮಾರ್ಗ ಪರಿಹಾರ. ಗ್ರಾಮೀಣ ಭಾಗದ ಪತ್ರಕರ್ತರಿಗೆ ಉ ಚಿತ ಬಸ್‌ಪಾಸ್ ಯೋಜನೆಯನ್ನು ಬಜೆಟ್‌ನಲ್ಲಿ ಪ್ರಕಟಿಸಿದ್ದಾರೆ.

## ಸಿದ್ದರಾಮಯ್ಯ ಬಜೆಟ್ ಕುರಿತಂತೆ ವಿಪಕ್ಷಗಳು ಕಿಡಿ

ಸಿದ್ದರಾಮಯ್ಯ ಬಜೆಟ್ ಕುರಿತಂತೆ ವಿಪಕ್ಷಗಳು ಕಿಡಿಕಾರಿದೆ. ಸಿದ್ದರಾಮಯ್ಯ ಕಳಪೆ ಬಜೆಟ್ ಮಂಡಿಸಿದ್ದಾರೆ.

ನನ್ನ ಜೀವಮಾನದಲ್ಲೇ ಇಂತಹ ಕಳಪೆ ಬಜೆಟ್ ನೋಡಿಲ್ಲ. ಹದಿನಾಲ್ಕು ಬಜೆಟ್ಗಳನ್ನು ಮಂಡಿಸಿರುವ ಸಿದ್ದರಾಮಯ್ಯರಿಂದ ಇಂತಹ ಕಳಪೆ ಬಜೆಟ್ ನಿರೀಕ್ಷಿಸಿರಲಿಲ್ಲ ಎಂದು ಯಡಿಯೂರಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಬಾರಿ ಬಜೆಟ್ನ ಬಹುತೇಕ ಅಂಶ ಕೇಂದ್ರ ಸರ್ಕಾರವನ್ನು ದೂರಲು ಮೀಸಲಿಡಲಾಗಿದೆ. ದೆಹಲಿ ಪ್ರತಿಭಟನೆಯ ಮುಂದುವರೆದ ಭಾಗವಾಗಿ ಈ ಆಯವ್ಯಯ ಮಾಡಲಾಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಇನ್ನು ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ, ದೇಶದಲ್ಲಿ ಅಮೃತ ಕಾಲದ ಬಗ್ಗೆ ಚರ್ಚೆಯಾಗುತ್ತಿದೆ. ಆದರೆ, ಸಿದ್ದರಾಮಯ್ಯ ಬಜೆಟ್ ನೋಡಿದ್ರೆ ಅಮೃತ ಅಲ್ಲ, ವಿನಾಶ ಕಾಲ ಎನ್ನುವುದು ತಿಳಿಯುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಇದಕ್ಕೆ ಪ್ರತಿಕ್ರಿಯಿಸಿರುವ ಸಿಎಂ ಸಿದ್ದರಾಮಯ್ಯ ಬಿಜೆಪಿಗರ ತಲೆಯಲ್ಲಿ ಏನು ಇಲ್ಲ. ಇವರೆಲ್ಲಾ ಸಂಸದರಾಗಲು ನಾಲಾಯಕ್ ಎಂದರು. ಈ ಬಾರಿ 3,71, 383 ಕೋಟಿ ರೂಪಾಯಿ ಗಾತ್ರದ ಬಜೆಟ್ ಮಂಡಿಸಲಾಗಿದೆ. ಇದು ಕಳೆದ ಬಜೆಟ್ಗಿಂತ 46,630 ಕೋಟಿ ರೂ. ಹೆಚ್ಚು ಗಾತ್ರದ ಬಜೆಟ್ ಎಂದರು.

## ಬಜೆಟ್ ಮುಖ್ಯಾಂಶಗಳು

* ಕರ್ನಾಟಕ ರೈತ ಸಮೃದ್ಧಿ ಯೋಜನೆ
* ಆಯ್ದ ಜಿಲ್ಲೆಗಳಲ್ಲಿ ಕಿಸಾನ್ ಮಾಲ್ ಸ್ಥಾಪನೆ
* ಕೃಷಿ ಅಭಿವೃದ್ಧಿ ಪ್ರಾಧಿಕಾರ ರಚನೆ
* ವಿಜಯಪುರದಲ್ಲಿ ಹೊಸತೋಟಗಾರಿಕೆ ಕಾಲೇಜು
* 1 ಸಾವಿರ ಆಂಗ್ಲ ಮತ್ತು ಕನ್ನಡ ಮಾಧ್ಯಮದ ಸರ್ಕಾರಿ ಶಾಲೆ ಆರಂಭ
* ಮೂಲಸೌಕರ್ಯ ಅಭಿವೃದ್ಧಿಗೆ 5 ಸಾವಿರ ಕೋಟಿ
* ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಸ್ಮಾರಕ ನಿರ್ಮಾಣ
* ಬೆಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪದ್ಮಶ್ರೀ ಸಿದ್ದಲಿಂಗಯ್ಯ ಗ್ರಂಥಾಲಯ ಸ್ಥಾಪನೆ
* ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗದಲ್ಲಿ ಶೇ.2ರಷ್ಟು ಮೀಸಲಾತಿ.
* ಕಲ್ಯಾಣ ಪಥ ಯೋಜನೆ
* ವಿಶ್ವಗುರು ಬಸವಣ್ಣನವರ ಭಾವಚಿತ್ರದಲ್ಲಿ ವಿಶ್ವಗುರು ಬಸವಣ್ಣ ಪ್ರಧಾನಮಂತ್ರಿಮುದ್ರಾ ಸಾಂಸ್ಕೃತಿಕ ನಾಯಕ ಮುದ್ರಣ.
* 80 ವರ್ಷ ಮೇಲ್ಪಟ್ಟ ಹಿರಿಯರಿಗೆ ಮನೆಬಾಗಿಲಿಗೆ ಅನ್ನ ಸುವಿಧ ಯೋಜನೆ
* 1,500 ವಿಶೇಷ ಚೇತನರಿಗೆ ದ್ವಿಚಕ್ರ ವಾಹನ ವಿತರಣೆ
* 90 ಕೋಟಿ ರೂ.ವೆಚ್ಚದಲ್ಲಿ 75.938 ಸ್ಮಾರ್ಟ್‌ಫೋನ್
* 100 ಕೋಟಿ ರೂ. ವೆಚ್ಚದಲ್ಲಿ 1 ಸಾವರಿ ಅಂಗನವಾಡಿ ಕಟ್ಟಡ ನಿರ್ಮಾಣ
* ಅಂಗನವಾಡಿ ಕಾರ್ಯಕರ್ತರಿಗೆ ಗ್ರಾಚ್ಯುಟಿ ಸೌಲಭ್ಯ
* ಅಂಗನವಾಡಿ ಕಾರ್ಯಕರ್ತರಿಗೆ ಸ್ಮಾರ್ಟ್‌ಫೋನ್
* ಬೆಂಗಳೂರಿನ ಬಡ ಜನರಿಗೆ ಉಚಿತ ಪ್ರಯೋಗಾಲಯ ಸೇವೆ
* 430 ಪ್ರಯೋಗಾಲಯಗಳ ಸ್ಥಾಪನೆಗೆ 20 ಕೋಟಿ ಮತ್ತು ಬೆಂಗಳೂರು * ವೈದ್ಯಕೀಯ ಕಾಲೇಜುಗಳ ನಿರ್ಮಾಣ ಉಪಕರಣ ಖರೀದಿಗೆ 400 ಕೋಟಿ
* ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ 130 ಕೋಟಿ
* ಖಾಲಿ ಇರುವ ಶಿಕ್ಷಕರ, ಉಪನ್ಯಾಸಕರ ನೇಮಕಕ್ಕೆ ಕ್ರಮ
* ಕಾಲೇಜು ಸೌಲಭ್ಯಕ್ಕೆ 250 ಕೋಟಿ ಮೀಸಲು

ಎಲ್ಲ ಸರ್ಕಾರಿ ಶಾಲಾ–ಕಾಲೇಜುಗಳಲ್ಲಿ ಉಚಿತ ವಿದ್ಯುತ್‌ಗೆ 25 ಕೋಟಿ

* ವಕ್ಸ್ ಅಭಿವೃದ್ಧಿಗಳ ಆಸ್ತಿಗೆ ಸಂರಕ್ಷಣೆ, ಅಭಿವೃದ್ಧಿಗೆ 100 ಕೋಟಿ
* ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗೆ 200ಕೋಟಿ
* ವಿಜ್ಞಾನ ವಿದ್ಯಾರ್ಥಿಗಳಿಗೆ ಸಿಇಟಿ ತರಬೇತಿಗೆ 10 ಕೋಟಿ
* ಸುಳ್ಳು ಸುದ್ದಿ ತಡೆಗೆ ಸತ್ಯಶೋಧನಾ ತಂಡ
* 76 ಗೋದಾಮುಗಳ ನಿರ್ಮಾಣಕ್ಕೆ ವಿಶೇಷ ಪ್ಯಾಕೇಜ್
* ಮೇ ತಿಂಗಳಲ್ಲಿ ಕಾವೇರಿ 5ನೇ ಹಂತ ಕಾಮಗಾರಿ ಆರಂಭ
* ಮಂಗಳೂರಿನಲ್ಲಿ ಅತ್ಯಾಧುನಿಕ ಕೃಷಿ ಸಂಕಿರಣ
* ಬೆಂಗಳೂರು ಉಪರೈಲು ಕಾಮಗಾರಿಗೆ ಚುರುಕಿಗೆ ಕ್ರಮ,
* ಬಿಎಂಟಿಸಿ ಗೆ ಹೊಸದಾಗಿ 1,334 ಹೊಸ ಇವಿ ಬಸ್ ಖರೀದಿ
* ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್‌ಪಾಸ್
* ಮೀನುಗಾರರ ರಕ್ಷಣೆಗೆ ಸಮುದ್ರ ಅಂಬ್ಯುಲೆನ್ಸ್
* ವಿಜಯಪುರ ಜಿಲ್ಲೆಯಲ್ಲಿ ತೋಟಗಾರಿಕೆ ಕಾಲೇಜು
* ಮೂರು ರಾಜ್ಯಗಳಲ್ಲಿ ಆಹಾರ ಪಾರ್ಕ್
* ಬೆಂಗಳೂರಿನಲ್ಲಿ ಬ್ಯುಸಿನೆಸ್ ಕಾರಿಡಾರ್
* ಜಿಎಸ್‌ಟಿಯಲ್ಲಿ ರಾಜ್ಯಕ್ಕೆ 2ನೇ ಸ್ಥಾನ
* 3 ಲಕ್ಷ ಮನೆಗಳ ನಿರ್ಮಾಣದ ಗುರಿ
* ರಾಜ್ಯದ್ಯಂತ 50 ಕಡೆಗಲ್ಲಿ ನಮ್ಮ ಮಿಲೆಟ್ ಯೋಜನೆ

## 3.71353 ಕೋಟಿ ಬಜೆಟ ಮಂಡನೆ


ನೀರಾವರಿ – 19,179 ಕೋಟಿ
ನಗರಾಭಿವೃದ್ಧಿ ಮತ್ತು ವಸತಿ– 18,155 ಕೋಟಿ
ಕಂದಾಯ– 16.170 ಕೋಟಿ
ಆರೋಗ್ಯ – 15,145 ಕೋಟಿ
ಸಮಾಜ ಕಲ್ಯಾಣ 13,334 ಕೋಟಿ
ಲೋಪಯೋಗಿ – 10,424 ಕೋಟಿ
ಆಹಾರ ಮತ್ತು ನಾಗರೀಕ ಸರಬರಾಜು– 9,963 ಕೋಟಿ
ಕೃಷಿ ಮತ್ತು ತೋಟಗಾರಿಕೆ– 6688 ಕೋಟಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ– 3307 ಕೋಟಿ
ಇತರೆ– 1,24,593 ಕೋಟಿ

**ರಾಜ್ಯದ ಸ್ವಂತ ತೆರಿಗೆ ಸಂಗ್ರಹ ಎಲ್ಲಿಂದ?**

ಮೋಟಾರು ವಾಹನ – 13,000 ಕೋಟಿ
ನೋಂದಣಿ ಮತ್ತು ಮುದ್ರಾಂಕ – 26,000 ಕೋಟಿ
ರಾಜ್ಯ ಅಬಕಾರಿ 38,525 ಕೋಟಿ
ವಾಣಿಜ್ಯ ತೆರಿಗೆ– 1,10,000 ಕೋಟಿ
ಇತರೆ – 2,368 ಕೋಟಿ

## ಬೆಳಗಾವಿ ಸೇರಿದಂತೆ 11 ನಗರಗಳಲ್ಲಿ ರಾತ್ರಿ 1 ಗಂಟೆಯವರೆಗೆ ವ್ಯಾಪಾರ ವಹಿವಾಟಿಗೆ ಅವಕಾಶ ನೀಡಿದ ಸಿಎಂ ಸಿದ್ದರಾಮಯ್ಯ

ಬೆಳಗಾವಿ: ಬೆಳಗಾವಿ ಸೇ–ರಿದಂತೆ 11 ನಗರಗಳಲ್ಲಿ ರಾತ್ರಿ 1 ಗಂಟೆವರೆಗೆ ವ್ಯಾಪಾರ ವಹಿವಾಟಿಗೆ ರಾಜ್ಯ ಸರ್ಕಾರ ಅವಕಾಶ ಕಲ್ಪಿಸಿದೆ. ಈ ನಗರಗಳಲ್ಲಿ ರಾತ್ರಿ 11 ಗಂಟೆಯವರೆಗೆ ವ್ಯಾಪಾರ ವಹಿವಾಟಿಗೆ ಅವಕಾಶ ನೀಡುವುದಾಗಿ ಬಜೆಟ್ನಲ್ಲಿ ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.



ವಾಣಿಜ್ಯ ಮತ್ತು ವ್ಯಾಪಾರದ ಹಿತದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ ವಹಿವಾಟಿನ ಸಮಯವನ್ನು ಹೆಚ್ಚಿಸಲಾಗಿದ್ದು, ಬೆಳಗಿನ ಜಾವ 1:00 ಗಂಟೆಯವರೆಗೆ ವ್ಯಾಪಾರ ವಹಿವಾಟು ಮಾಡಲು ಅವಕಾಶ ನೀಡುವುದಾಗಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಯಾವ್ಯಾವ ನಗರಗಳು? ಬಿಬಿಎಂಪಿ ಸೇರಿ ರಾಜ್ಯದಲ್ಲಿ ಬೆಳಗಾವಿ,ಬಳ್ಳಾರಿ, ದಾವಣಗೆರೆ, ಹುಬ್ಬಳ್ಳಿ– ಧಾರವಾಡ, ಕಲಬುರಗಿ, ಮಂಗಳೂರು, ಮೈಸೂರು, ಶಿವಮೊಗ್ಗ ತುಮಕೂರು, ವಿಜಯಪುರ ಮಹಾನಗರಪಾಲಿಕೆಗಳಿದ್ದು, ಈ ಎಲ್ಲಾ ಮಹಾನಗರ ವ್ಯಾಪ್ತಿಗಳಲ್ಲಿ ಇನ್ನೂ ಮುಂದೆ ರಾತ್ರಿ 1:00 ಗಂಟೆಯವರೆಗೆ ವ್ಯಾಪಾರ ವಹಿವಾಟು ನಡೆಯಲಿದೆ.

ಬಡಜನರಿಗೆ ಉಚಿತ ಪ್ರಯೋಗಾಲಯ: ಬೆಂಗಳೂ–ರಿನ ಬಡಜನರಿಗೆ ಉಚಿತ ಪ್ರಯೋಗಾಲಯ ಸೇವೆ ಒದಗಿಸಲಾಗುವುದು. ಇದಕ್ಕೆ 430 ಪ್ರಯೋಗಾಲಯಗಳ ಸ್ಥಾಪನೆಗೆ 20 ಕೋಟಿ ಮೀಸಲು ಇಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಬಜೆಟ್ನಲ್ಲಿ ಘೋಷಣೆ ಮಾಡಿದರು. ವೈದ್ಯಕೀಯ ಕಾಲೇಜುಗಳ ನಿರ್ಮಾಣ, ಉಪಕರಣ ಖರೀದಿಗೆ 400 ಕೋಟಿ ಅನುದಾನ ನೀಡಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದರು.

## ಸರ್ವರಿಗೂ ಸಮಪಾಮಿ–ಸಮಬಾಳು ನೀಡಿದ ಬಜೆಟ್: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ದೇಶದ ಇತಿಹಾಸದಲ್ಲೇ ದಾಖಲೆಯ 15ನೇ ಬಜೆಟ್ ಮಂಡಿಸಿರುವ ಸಿಎಂ ಸಿದ್ದರಾಮಯ್ಯ ಅವರು, ಜನಪರ ಐದು ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸುವ ಜತೆಗೆ, ಬಜೆಟ್‌ನಲ್ಲಿ ಹೊಸ ಯೋಜನೆಗಳನ್ನು ನೀಡುವ ಮೂಖಿಕ ಸರ್ವ–ರಿಗೂ ಸಮಪಾಮಿ ಸರ್ವರಿಗೂ ಸಮಬಾಳು ನೀಡಿದ್ದಾರೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದ್ದಾರೆ.




ಸಿಎಂ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಸಂವಿಧಾನ ಲಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಶಯದಂತೆ ಲಕ್ಷಣ ಕ್ಷೇತ್ರಕ್ಕೆ ಹಿಂದಿನ ಅವಧಿಗಿಂತ ದುಪ್ಪಟ್ಟು ಹಣ ನೀಡಿರುವ ಕ್ರಮ ಅಭೂತಪೂರ್ವ ನಿರ್ಧಾರವಾಗಿದೆ. ಇನ್ನು ಸಮಾಜ ಕಲ್ಯಾಣ, ಲೋಕೋಪಯೋಗಿ ಇಲಾಖೆ, ಗ್ರಾಮೀಣಾಭಿವೃದ್ಧಿ ಕ್ಷೇತ್ರಗಳಿಗೆ ಹೆಚ್ಚಿನ ಅನುದಾನ ಮೀಸಲಿಟ್ಟಿ ರುವುದು ಅಭಿನಂದನಾರ್ಹ.

ಬಸವಣ್ಣನನ್ನು ಸಾಂಸ್ಕೃತಿ–ಕ ನಾಯಕ ಎಂದು ಘೋಷಿಸಿ, ಬಸವಣ್ಣ ಜನಿಸಿದ ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ರಚನೆ ಮತ್ತು ವಚನ ಪ್ರಚಾರ ಕಾರ್ಯ ಸರ್ಕಾರದ ಬಸವಣ್ಣನ ವಿಚಾರಗಳೆಡೆಗೆ ಇರುವ ಬದ್ಧತೆಯನ್ನು ಪ್ರದರ್ಲಸಿದೆ. ಜೊತೆಗೆ ಇ–ಆಡಳಿತ, ಆಡಳಿತ ಸುಧಾರಣೆ, ವೇತನ ಪರಿಷ್ಕರಣೆ, ಕಲೆ, ಸಾಹಿತ್ಯ, ಸಂಸ್ಕೃತಿ, ಕ್ರೀಡಾ ಕ್ಷೇತ್ರಗಳ ಹೆಚ್ಚಿನ ಉತ್ತೇಜನಕ್ಕೆ ನೀಡಲಾಗಿದೆ. ನಾರಾಯಣ ಗುರು, ಪೆರಿಯಾರ್ ರಾಮಸಾಮಿ, ರಾಮಮನೋಹರ ಲೋಹಿಯಾ, ಬಾಬು ಜಗಜೀವನ್ ರಾಮ್ ಅವರ ಕೃತಿಗಳ ಕನ್ನಡ ಅನುವಾದಗಳನ್ನು ಮಾಡಮಿ ಉದ್ದೇಲಸಿರುವುದು ಕನ್ನಡಿಗರನ್ನು ಸೈದ್ಧಾಂತಿಕವಾಗಿ ಗಟ್ಟಿಗೊಳಿಸುವ ಪ್ರಯತ್ನವಾಗಿದೆ ಎಂದು ತಿಳಿಸಿದ್ದಾರೆ.

ನಾಮಫವಿಕಗಳಲ್ಲಿ ಶೇ. 60ರಷ್ಟು ಕನ್ನಡ ಬಳಕೆಯನ್ನು ಕಡ್ಡಾಯಗೊಳಿಸಮಿ ಸರ್ಕಾರ ಮುಂದಾಗಿದ್ದು, ಬಜೆಟ್ ನಲ್ಲಿ ಇದನ್ನು ಉಲ್ಲೇಖಿಸಿ, ಅಗತ್ಯ ಕ್ರಮಕೈಗೊಂಡಿರುವುದು ಕನ್ನಡದ ಅಭಿವೃದ್ಧಿಯೆಡೆಗೆ ಕಾಂಗ್ರೆಸ್ ಸರ್ಕಾರದ ಬದ್ಧತೆಯ ಪ್ರತೀಕವಾಗಿದೆ. ಗ್ರಾಮೀಣ ಪತ್ರಕರ್ತರಿಗೆ ಉಚಿತ ಪಾಸ್ ಸೇ–ರಿದಂತೆ ವಿವಿಧ ಯೋಜನೆಗಳನ್ನು ನೀಡುವ ಮೂಖಿಕ ಪತ್ರಕರ್ತರ ಕ್ಷೇಮಾಭಿವೃದ್ಧಿಗೆ ಸರ್ಕಾರ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಂಡಿದೆ ಎಂದಿದ್ದಾರೆ.

ವಿಶೇಷವಾಗಿ ಬೆಳಗಾವಿ ನಗರಕ್ಕೆ 450 ಕೋಟಿ ವೆಚ್ಚದ 4.5 ಕಿ.ಮೀ. ಉದ್ದದ ಮೇಲ್ಸೇತುವೆ, ಜವಳಿ ಪಾರ್ಕ, ಆಧುನಿಕ ಕ್ರಿಟಿ–ಕಲ್ ಕೇರ್ ಬ್ಲಾಕ್, ಸುಪ್ರಸಿದ್ಧ ಗೋಕಾಕ ಜಪಿಪಾತವನ್ನು ಪ್ರೇಕ್ಷಣೀಯ ಸ್ಥಳವಾಗಿ ಅಭಿವೃದ್ಧಿ ಸೇರಿದಂತೆ ಜಿಲ್ಲೆಯ ನೀರಾವರಿ ಯೋಜನೆಗಳು ಸೇರಿದಂತೆ ವಿವಿಧ ಯೋಜನೆಗಳನ್ನು ನೀಡಿರುವ ಸಿಎಂ ಸಿದ್ದರಾಮಯ್ಯ ಅವರಿಗೆ ಪ್ರಕಟಣೆ ಮೂಖಿಕ ಅಭಿನಂದನೆಗಳನ್ನು ತಿಳಿಸಿದ್ದಾರೆ.

## ಜಗಜ್ಯೋತಿ ಬಸವಣ್ಣರನ್ನು ಸಾಂಸ್ಕೃತಿಕ ನಾಯಕ ಮತ್ತು ವಚನ ಸಂಗ್ರಹಾಲ ನಿರ್ಮಾಣ: ಸಿಎಂ ಘೋಷಣೆ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಕಡ್ಡಾಯ




ಬೆಂಗಳೂರು (ಬಜೆಟ್ ಅಧಿವೇಶನ ): ಸಿಎಂ ಸಿದ್ದರಾಮಯ್ಯನವರ ಸರ್ಕಾರ ಬಸವಣ್ಣರನ್ನ 'ಸಾಂಸ್ಕೃತಿಕ ನಾಯಕ' ಎಂದು ಘೋಷಣೆ ಮಾಡಿದೆ. ಎಲ್ಲಾ ಭಾವಚಿತ್ರಗಳಲ್ಲಿ 'ಸಾಂಸ್ಕೃತಿಕ ನಾಯಕ' ಎಂದು ಮುದ್ರಣ ಮಾಡಿದೆ.


ಬಜೆಟ್ ಮಂಡನೆ ವೇಳೆ ಬಸವನ ಬಾಗೇವಾಡಿ ಅಭಿವೃದ್ಧಿಗೆ ಪ್ರಾಧಿಕಾರ ರಚಿಸಲಾಗುತ್ತದೆ ಎಂದು ಸಿಎಂ ಹೇಳಿದ್ದಾರೆ.

ಕಲಬುರಗಿಯಲ್ಲಿ ವಚನ ಸಂಗ್ರಹಾಲಯವನ್ನ ಸ್ಥಾಪಿಸಲಾಗುತ್ತದೆ ಎಮದು ಸಿಎಂ ಬಜೆಟ್ ಮಂಡನೆ ವೇಳೆ ತಿಳಿಸಿದ್ದಾರೆ. ಎಲ್ಲಾ ಕಚೇರಿ, ಅಂಗಡಿ–ಮುಂಗಟ್ಟುಗಳು, ವಾಣಿಜ್ಯೋದ್ಯಮಗಳು

ಎಲ್ಲಾ ಸಂಸ್ಥೆಗಳ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಕಡ್ಡಾಯ ಎಂದು ತಿಳಿಸಿದ್ದಾರೆ.

ತುಳು, ಕೊಡವ, ಬ್ಯಾರಿ, ಕೊಂಕಣಿ ಭಾಷೆಗಳ ಅಭಿವೃದ್ಧಿಗೆ ಪ್ರೋತ್ಸಾಹ ನೀಡುವುದಾಗಿಯೂ ಹೇಳಿದ್ದಾರೆ.

## ರಾಜ್ಯ ಬಜೆಟ್ ಅಭಿವೃದ್ಧಿ ಪರವಾಗಿಲ್ಲ



ರಾಜ್ಯ ಸರ್ಕಾರದ ಬಜೆಟ್ ಬಡವರ ಹಾಗೂ ರೈತರ ಹಿತಕಾಪಾಡಿಲ್ಲ. ಗ್ಯಾರಂಟಿಗಳ ಭರಾಟೆಯಲ್ಲಿ ರಾಜ್ಯವನ್ನು ಆರ್ಥಿಕವಾಗಿ ಮತ್ತಷ್ಟು ದಿವಾಳಿಯತ್ತ ಕೊಂಡೊಯ್ಯದಿದೆ. ಗ್ಯಾರಂಟಿಗಳನ್ನು ಈಡೇರಿಸುವುದಕ್ಕಾಗಿ ಹೆಚ್ಚಿನ ಹಣವನ್ನು ಮೀಸಲಾಗಿಟ್ಟಿರುವುದು, ಇತರಅಭಿವೃದ್ಧಿ ಕಾಮಗಾ–ರಿಕೆಗಳನ್ನು ಗೌಣವಾಗಿ ಕಂಡಿರುವುದು ವಿಪರ್ಯಾಸ. ಚಿಕ್ಕ ಹಾಗೂ ಬೃಹತ್ ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡಿಲ್ಲ. ಮುಂದಿನ ಲೋಕ ಸಭಾಚುನಾವಣೆಯಲ್ಲಿ ಜನತೆಯ ಮತವನ್ನು ಸೆಳೆಯಲು ಜನತೆಯ ದಿಕ್ಕನ್ನು ತಪ್ಪಿಸುತ್ತಿದೆ. ಇದೊಂದು ಅಭಿವೃದ್ಧಿ ಪರವಾದ ಬಜೆಟ್‌ಅಲ್ಲವೇಅಲ್ಲ. ಅಯೋಧ್ಯೆಯಲ್ಲಿ ಕರ್ನಾಟಕದ ರಾಮಭಕ್ತ–ರಿಗೆ ಇರಲು ಸಂಕೀರ್ಣವನ್ನು ನಿರ್ಮಿಸುವ ಯೋಜನೆಯನ್ನು ಪ್ರಸ್ತಾಪಿಸ ಬೇಕಾಗಿತ್ತುಅದನ್ನು ಮಾಡಿಲ್ಲ ಎಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಬೆಳಗಾವಿ ಪಾಲಿಕೆ ಆಯುಕ್ತರಾಗಿ ಪಿ.ಎನ್. ಲೋಕೇಶ್ ನೇಮಕ




ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆ ನೂತನ ಆಯುಕ್ತರಾಗಿ ಪಿ.ಎನ್. ಲೋಕೇಶ ಅವರನ್ನು ನೇಮಕ ಮಾಡಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ.

ಬಾಗಲಕೋಟೆ ಜಿಲ್ಲೆಗೆ ವಿಶೇಷ ಜಿಲ್ಲಾಧಿಕಾ–ರಿಯಾಗಿದ್ದರು. ಈಗ ಅವರನ್ನು ಬೆಳಗಾವಿ ಪಾಲಿಕೆ ಆಯುಕ್ತರಾಗಿ ನೇಮಕಮಾಡಿ ಆದೇಶ ಹೊರಡಿಸಿದೆ. ಬಹುಶಃ ಒಂದೆರಡು ದಿನದಲ್ಲಿ ಅವರು ಅಧಿಕಾರ ವಹಿಸಿಕೊಳ್ಳುವ ನಿರೀಕ್ಷೆ ಇದೆ. ಈಗ ಹಂಗಾಮಿ ಆಯುಕ್ತರಾಗಿ ಕಳೆದ ಎರಡು ದಿನಗಳ ಹಿಂದೆ ರಾಜಶ್ರೀ ಜೈನಾಪುರ ಅಧಿಕಾರ ವಹಿಸಿಕೊಂಡಿದ್ದರು.

## ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಆಸ್ಪತ್ರೆಗೆ ದಾಖಲು



ನವದೆಹಲಿ: ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರಿಗೆ ಆರೋಗ್ಯದಲ್ಲಿ ಏರುಪೇರಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಹಾಗಾಗಿ ಅವರು ಇಂದು ಉತ್ತರ ಪ್ರದೇಶದ ಚಂದೌಲಿಯಲ್ಲಿ ನಡೆಯಲಿರುವ ಭಾರತ್ ಜೋಡೋ ನ್ಯಾಯ್ ಯಾತ್ರೆಯಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ. ಅವರು ಅನಾರೋಗ್ಯಕ್ಕೆ ಒಳಗಾಗಿದ್ದಾರೆ ಮತ್ತು ಚೇತರಿಸಿಕೊಂಡ ನಂತರ ಯಾತ್ರೆಗೆ ಸೇರುವುದಾಗಿ ಸ್ವತಃ ಪ್ರಿಯಾಂಕಾ ಗಾಂಧಿ ತಿಳಿಸಿದ್ದಾರೆ. ಈ ಕುರಿತು ಟ್ವೀಟ್ ಮಾಡಿರುವ ಪ್ರಿಯಾಂಕಾ ಗಾಂಧಿ, "ಭಾರತ್ ಜೋಡೋ ನ್ಯಾಯ್ ಯಾತ್ರೆ ಉತ್ತರ ಪ್ರದೇಶವನ್ನ ತಲುಪಲು ನಾನು ಕುತೂಹಲದಿಂದ ಕಾಯುತ್ತಿದ್ದೆ, ಆದರೆ ಅನಾರೋಗ್ಯದಿಂದಾಗಿ ನನ್ನನ್ನು ಇಂದೇ ಆಸ್ಪತ್ರೆಗೆ ದಾಖಲಿಸಬೇಕಾಯಿತು. ನನಗೆ ಚೇತರಿಸಿಕೊಂಡ ಕೂಡಲೇ ನಾನು ಪ್ರಯಾಣದಲ್ಲಿ ಸೇರುತ್ತೇನೆ. ಅಲ್ಲಿಯವರೆಗೆ, ಚಂದೌಲಿ–ಬನಾರಸ್ ತಲುಪುವ ಎಲ್ಲಾ ಪ್ರಯಾಣಿಕರು, ನನ್ನ ಸಹೋದ್ಯೋಗಿಗಳು ಮತ್ತು ಪ್ರಯಾಣಕ್ಕಾಗಿ ಶ್ರದ್ಧೆಯಿಂದ ತಯಾರಿ ನಡೆಸುತ್ತಿರುವ ಉತ್ತರ ಪ್ರದೇಶದ ಪ್ರೀತಿಯ ಸಹೋದರನಿಗೆ ನಾನು ಶುಭ ಹಾರೈಸುತ್ತೇನೆ" ಎಂದಿದ್ದಾರೆ.

## ಇದೊಂದು ಅಭಿವೃದ್ಧಿ ಪರ ಬಜೆಟ್: ಲಕ್ಷ್ಮೀ ಹೆಬ್ಬಾಳಕರ್ ಮುಖ್ಯಮಂತ್ರಿಗಳಿಗೆ ಧನ್ಯವಾದ ಅರ್ಪಿಸಿದ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

ಬೆಂಗಳೂರು : ಮುಖ್ಯಮಂತ್ರಿ ಸಿದ್ಧರಾಮಯ್ಯ ಐತಿಹಾಸಿಕ ಹಾಗೂ ರಚನಾತ್ಮಕ ಬಜೆಟ್ ಮಂಡಿಸಿದ್ದು, ರಾಜ್ಯದ ಅಭಿವೃದ್ಧಿಗೆ ಪೂರಕವಾಗಿದೆ. ಎಲ್ಲಾ ವರ್ಗದವರಿಗೆ ಸಲ್ಲುವ ಬಜೆಟ್ ಇದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಮುಖ್ಯಮಂತ್ರಿಗಳಿಗೆ ಧನ್ಯವಾದ ಅರ್ಪಿಸಿದ್ದಾರೆ.

2024–25ನೇ ಸಾಲಿನಲ್ಲಿ ಮಹಿಳಾ ಉದ್ದೇಶಿತ ಯೋಜನೆಗಳಿಗೆ 86,423 ಕೋಟಿ ರೂ.ಗಳನ್ನು ಒದಗಿಸಲಾಗಿದೆ. ಇಲಾಖೆಯ ಬಹುತೇಕ ಬೇಡಿಕೆಗಳಿಗೆ ವ ುಖ್ಯ ವ ಂತ್ರಿ ಗ ಳ ು ಸ್ಪಂದಿಸಿದ್ದಾರೆ. ಮಕ್ಕಳ ಉದ್ದೇಶಿತ ಯೋಜನೆಗಳಿಗೆ ಬಜೆಟ್‌ನಲ್ಲಿ 54,617 ಕೋಟಿ ರೂ.ಗಳನ್ನು ಒದಗಿಸಲಾಗಿದೆ ಎಂದರು.



ಪ್ರಸಕ್ತ ಸಾಲಿನಲ್ಲಿ ಇಲಾಖೆ ನಿರೀಕ್ಷಿಸಿದಷ್ಟು ಬಜೆಟ್ ದಕ್ಕಿದ್ದು, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆ ಗೃಹಲಕ್ಷ್ಮಿಗೆ ಈ ಸಾಲಿನಲ್ಲಿ 28,608 ಕೋಟಿ ರೂ. ಒದಗಿಸಲಾಗಿದೆ.

ಇದರಿಂದ ಕುಟುಂಬ ನಿರ್ವಹಣೆಯ ಜೊತೆಗೆ ಆದ–ಾಯೋತ್ಪನ್ನ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಲು ಮಹಿಳೆಯರಿಗೆ ಈ ಯೋಜನೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

**ಸ್ಮಾರ್ಟ್ ಫೋನ್‌ಗಳಿಗೆ 90 ಕೋಟಿ:** ಅಂಗನವಾಡಿ ಕಾರ್ಯ ಕರ್ತೆಯರ ಮತ್ತು ಮೇಲ್ವಿಚಾರಕಿಯರ ಬಹುದಿನಗಳ ಬೇಡಿಕೆಯಾಗಿದ್ದ ಸ್ಮಾರ್ಟ್ ಫೋನ್‌ಗಾಗಿ 90 ಕೋಟಿ ರೂಪಾಯಿ ನೀಡಲಾಗಿದೆ. 90 ಕೋಟಿ ರೂ. ವೆಚ್ಚದಲ್ಲಿ 75,938 ಫೋನ್‌ಗಳನ್ನ ನೀಡಲಾಗುತ್ತಿದ್ದು, ಇದರಿಂದ ಅಂಗನವಾಡಿ ಮೂಲಕ ಕೈಗೊಳ್ಳುವ ಚಟುವಟಿ–ಕೆಗಳನ್ನು ಸುಗಮಗೊಳ್ಳಲಿದೆ. ಮಕ್ಕಳ ಪ್ರಾರಂಭಿಕ ಶಿಕ್ಷಣ ಮತ್ತು ಆರೈಕೆಯಲ್ಲಿ ಸಾಮರ್ಥ್ಯ ಅಭಿವೃದ್ಧಿಗೆ 20,000 ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ತರಬೇತಿ ಕಾರ್ಯಾ ಗಾರಗಳನ್ನು ಆಯೋಜಿಸಲು 10 ಕೋಟಿ ರೂ. ಗಳನ್ನು ಒದಗಿಸಲಾಗಿದೆ ಎಂದು ಸಚಿವರು ಹರ್ಷ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾ ು ರ್ಯ ನಿರ್ವ ಹಿ ಸು ತ್ತಿ ರು ವ 1,000 ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು 200 ಕೋಟಿ ರೂ.ಗಳ ವೆಚ್ಚದಲ್ಲಿ ನಿ ರ್ಮಿ ಸ ಲಾ ಗು ವು ದು. ಅಂಗನವಾಡಿ ಕಾರ್ಯಕರ್ತೆಯ–ರಿಗೆ ಮತ್ತು ಸಹಾಯಕಿಯ–ರಿಗೆ ಗ್ರಾಚ್ಯುಟಿ ಸವಲತ್ತುಗಳನ್ನು ನೀಡಲಾಗುವುದು ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

ಒಟ್ಟಾರೆ ಇದೊಂದು ಅತ್ಯಂತ ಸಮತೋಲಿತ, ಅಭಿವೃದ್ಧಿ ಪರ ಬಜೆಟ್ ಎಂದು ಹೆಬ್ಬಾಳಕರ್ ಪ್ರಶಂಸಿಸಿದ್ದಾರೆ.

ಉಡುಪಿ, ಬೆಳಗಾವಿಗೂ ಹೆಚ್ಚಿನ ಅನುದಾನ ನನ್ನ ತವರು ಜಿಲ್ಲೆ ಬೆಳಗಾವಿ ಹಾಗೂ ಉಸ್ತುವಾರಿ ಹೊತ್ತಿರುವ ಉಡುಪಿ ಜಿಲ್ಲೆಗಳಿಗೆ ಬಜೆಟ್ ನಲ್ಲಿ ಹೆಚ್ಚಿನ ಅನುದಾನ ನೀಡಲಾಗಿದೆ. ಇದಕ್ಕೆ ಮುಖ್ಯಮಂತ್ರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಸಚಿವರು ಹೇಳಿದರು.

## ಇಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ: ನಗರದ ಜೆಸ್ಕಾಂ ಉಪ ವಿಭಾಗ–1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲೀಪುರ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಬ್ಯಾಂಕ್–2 ಫೀಡರ್ನ ಎಫ್–36 ರ ತುರ್ತು ನಿರ್ವಹಣಾ ಕಾಮಗಾರಿ ಕೈಗೆತ್ತಿಕೊಳ್ಳುತ್ತಿರುವುದರಿಂದ ಫೆ.17 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರ ವ್ಯಾಪ್ತಿಯ ಬಂಡಿಹಟ್ಟಿ, ರಾಮನಗರ, ರೆಡ್ಡಿ ಲೇಔಟ್, ಆಶ್ರಯ ಕಾಲೋನಿ, ಆಜಾದ್ ನಗರ, ಎಂ.ಕೆ.ಫಂಕ್ಷನ್ ಹಾಲ್ ಹತ್ತಿರ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ ಫೆ.17 ರಂದು

ಬಳ್ಳಾರಿ: ನಗರದ ಜೆಸ್ಕಾಂ ಉಪ ವಿಭಾಗ–1 ಹಾಗು ಉಪ ವಿಭಾಗ–2ರ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆ ಹಾಗು SOP (Standard of Performance) ಬಗೆಗಿನ ಜಾಗೃತಿ ಸಭೆಯನ್ನು ಫೆ.17 ರಂದು ಬೆಳಿಗ್ಗೆ 11 ಗಂಟೆಗೆ ನಗರ ಉಪ–ವಿಭಾಗದಲ್ಲಿ ಏರ್ಪಡಿಸಲಾಗಿದೆ.

ವಿದ್ಯುತ್ ಸಮಸ್ಯೆಗಳಿರುವ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ತಮ್ಮ ಕುಂದು ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಸಲು ಅವಕಾಶ

ಬಳ್ಳಾರಿ: ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ 2022–23 ನೇ ಸಾಲಿನ ಮುಂಗಾರು ಹಾಗೂ ಹಿಂಗಾರು ಹಂಗಾಮಿನ ಬೆಳೆ ವಿಮೆ ಪ್ರಸ್ತಾವನೆಗಳನ್ನು ಬೆಳೆ ಸಮೀಕ್ಷೆಯೊಂದಿಗೆ ಹೊಂದಾಣಿಕೆಯಾಗದೆ ವಿಮಾ ಸಂಸ್ಥೆಯವರಿಂದ ಪ್ರಸ್ತಾವನೆಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ.

ಬಳ್ಳಾರಿ, ಕುರುಗೋಡು ತಾಲ್ಲೂಕಿನಲ್ಲಿ ಮುಂಗಾರು ಹಂಗಾಮಿನಲ್ಲಿ 04 ಪ್ರಸ್ತಾವನೆಗಳು ಹಾಗೂ ಹಿಂಗಾರು ಹಂಗಾಮಿನಲ್ಲಿ 11 ಪ್ರಸ್ತಾವನೆಗಳು ಆಕ್ಷೇಪಣೆಢಗೊಂಡಿರುತ್ತವೆ.

ರೈತರು ಆಕ್ಷೇಪಣೆಗಳಿದ್ದಲ್ಲಿ ಮಾರ್ಚ್ 02 ರೊಳಗೆ ಸಲ್ಲಿಸಬಹುದಾಗಿದೆ. ನಿಗದಿತ ಸಮಯದಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸದಿದ್ದಲ್ಲಿ ಅಂತಹ ಪ್ರಸ್ತಾವನೆಗಳನ್ನು ಅಸಿಂಧು ಎಂದು ಪರಿಗಣಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ದಯಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೋಟೆಲ್ ಮ್ಯಾನೇಜ್ಮೆಂಟ್ ತರಬೇತಿ: ನೋಂದಣಿಗೆ ಆಹ್ವಾನ

ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶದ ನಿರುದ್ಯೋಗ ಯುವಕ, ಯುವತಿಯರಿಗೆ ಹೋಟೆಲ್ ಮ್ಯಾನೇಜ್ಮೆಂಟ್ ಕ್ಷೇತ್ರದಲ್ಲಿ ಆಸಕ್ತಿವುಳ್ಳವರಿಗೆ 45 ದಿನಗಳ ತರಬೇತಿ ಹಮ್ಮಿಕೊಳ್ಳಲಾಗಿದ್ದು, ಆಸಕ್ತರಿಂದ ನೋಂದಣಿಗೆ ಆಹ್ವಾನಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಹೋಟೆಲ್ ಮ್ಯಾನೇಜ್ಮೆಂಟ್ ಕ್ಷೇತ್ರದ ಹೌಸ್ಕೀಪಿಂಗ್ ಅಟೆಂಡೆಂಟ್ ಮತ್ತು ಫುಡ್, ಬೆವರೇಜ್ ಸರ್ವೀಸ್–ಸ್ಟೆವಾರ್ಡ್ ಜಾಬ್ರೋಲ್ಗಳಲ್ಲಿ ಸೂಕ್ತ ತರಬೇತಿಯನ್ನು ನೀಡಿ ಉದ್ಯೋಗಾವಕಾಶ ಕಲ್ಪಿಸಲು ಉದ್ದೇಶಿಸಲಾಗಿದೆ.

ತರಬೇತಿ ಅವಧಿಯಲ್ಲಿ ಬಳ್ಳಾರಿ ನಗರ ಹಾಗೂ ಜಿಲ್ಲೆಯ ಗ್ರಾಮೀಣ ಅಭ್ಯರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಲಾಗುವುದು. ತರಬೇತಿ ಪೂರ್ಣಗೊಳಿಸಿದ ನಂತರ ಪ್ರಮಾಣ ಪತ್ರವನ್ನು ನೀಡಲಾಗುವುದು.

**ಅರ್ಹತೆಗಳು:***

ಅಭ್ಯರ್ಥಿಗಳು ಬಳ್ಳಾರಿ ಜಿಲ್ಲೆಯ ನಿವಾಸಿಯಾಗಿರಬೇಕು. ಅಭ್ಯರ್ಥಿಗಳು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಪಡೆದಿರಬೇಕು. ವಯೋಮಿತಿ 18 ರಿಂದ 30 ವರ್ಷದ ಒಳಗಿರಬೇಕು. ಅಭ್ಯರ್ಥಿಗಳು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದವರಾಗಿರಬೇಕು. 45 ದಿನಗಳ ಕಡ್ಡಾಯ ತರಬೇತಿಯನ್ನು ಪಡೆಯಬೇಕು.

ಆಸಕ್ತ ಅರ್ಹ ನಿರುದ್ಯೋಗಿ ಅಭ್ಯರ್ಥಿಗಳು http://tinyurl.com/2p9xerzb ಈ ಲಿಂಕ್ಗೆ ಭೇಟಿ ನೀಡಿ ಫೆ.26 ರೊಳಗಾಗಿ ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಹೊಸ ಜಿಲ್ಲಾಡಳಿತ ಭವನದ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿ ಅಥವಾ ಮೊ:9844444958 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.17 ರಂದು 'ಜಾಗ್ರತೆ' ಕಾರ್ಯಕ್ರಮ

ಬಳ್ಳಾರಿ: ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ವಂಚನೆ ಮುಕ್ತ ಸಮಾಜದ ನಿರ್ಮಾಣಕ್ಕಾಗಿ 'ಜಾಗ್ರತೆ' ಕಾರ್ಯಕ್ರಮವನ್ನು ಫೆ.17 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ನ ನಜೀರ್ಸಾಬ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಯುವ ಸಬಲೀಕರಣ, ಕ್ರೀಡೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಅವರು ಉದ್ಘಾಟನೆ ಮಾಡುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗು ಶಾಸಕ ಜೆ.ಎನ್ ಗಣೇಶ್, ಸಂಸದರಾದ ವೈ.ದೇವೇಂದ್ರಪ್ಪ, ಕರಡಿ ಸಂಗಣ್ಣ, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಈ.ತುಕಾರಾಂ, ಬಿ.ಎಂ ನಾಗರಾಜ್, ನಾರಾ ಭರತ್ ರೆಡ್ಡಿ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಮಹಾನಗರ ಪಾಲಿಕೆಯ ಮಹಾ ಪೌರರಾದ ಬಿ.ಶ್ವೇತ ಅವರು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕ ಬಿ.ಎಸ್.ಲೋಕೇಶ್ ಕುಮಾರ್, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್, ಸಹಾಯಕ ಆಯುಕ್ತ ಹೇಮಂತ್.ಎನ್., ಅರಣ್ಯ ಉಪಸಂರಕ್ಷಣಾಧಿಕಾರಿ ಸಂದೀಪ್ ಹಿಂದುರಾವ್ ಸೂರ್ಯವಂಶಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಕೆ.ಪಿ.ರವಿಕುಮಾರ್, ನವೀನ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತರಾದ ಜಿ.ಖಲೀಲ್ ಸಾಬ್, ಮಿನೆರ ಸ್ಟೀಲ್ಸ್ ಮತ್ತು ಪವರ್ ಪ್ರೈ.ಲಿಮಿಟೆಡ್ನ ನಿರ್ದೇಶಕ ಹನ್ಮಂತ್ ರೆಡ್ಡಿ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಸಂವಿಧಾನ ಶ್ರೇಷ್ಠತೆ ಎತ್ತಿಹಿಡಿದು, ಸಂವಿಧಾನದ ಆಶಯದಂತೆ ನಡೆಯುವುದು ನಮ್ಮ ಕರ್ತವ್ಯ: ಜಿಲ್ಲಾಧಿಕಾರಿ ದಿವ್ಯ ಪ್ರಭು



ಧಾರವಾಡ: ಭಾರತ ಸಂವಿಧಾನ ವಿಶ್ವದಲ್ಲಿಯೇ ಶ್ರೇಷ್ಠವಾದದ್ದು, ಅದರ ಶ್ರೇಷ್ಠತೆಯನ್ನು ಎತ್ತಿಹಿಡಿದು ಸಂವಿಧಾನದ ಆಶಯದಂತೆ ನಡೆಯುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಜಿಲ್ಲಾಡಳಿತ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತವಾಗಿ ಸಂವಿಧಾನ ಜಾಗೃತಿ ಜಾಥಾ ನಿಮಿತ್ತ ಆಯೋಜಿಸಿದ್ದ ವಿಕಲಚೇತನರ ಬೈಕ್ ರ್ಯಾಲಿಗೆ ಚಾಲನೆ ನೀಡಿ, ಡಾ. ಬಿ.ಆರ್.ಅಂಬೇಡ್ಕರ ಪುತ್ಥಳಿ ಮುಂಭಾಗದಲ್ಲಿ ಸಾಮೂಹಿಕ ಸಂವಿಧಾನ ಪೀಠಿಕೆ ಓದು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ನಮ್ಮ ಸಂವಿಧಾನದ ಪೀಠಿಕೆಯು ಸಂವಿಧಾನದ ತಿರುಳಾಗಿದೆ. ಪೀಠಿಕೆಯಲ್ಲಿ ಅಳವಡಿಸಿರುವ ಆಶಯಗಳನ್ನು ಭಾರತೀಯರಾದ ನಾವು ತಪ್ಪದೇ ಪಾಲಿಸಬೇಕು. ಭ್ರಾತೃತ್ವ, ಸಹಯೋದರತ್ವ ಸಾಮರಸ್ಯಗಳನ್ನು ಉಳಿಸಿ, ಬೆಳೆಸಲು ಸಂವಿಧಾನ ಮಾರ್ಗಸೂಚಿಯಾಗಿದೆ ಎಂದು ಅವರು ಹೇಳಿದರು.

ಸಂವಿಧಾನ ರಚನೆಗೊಂಡು 75 ವರ್ಷ ತುಂಬಿದೆ. ಈ ಸಂದರ್ಭದಲ್ಲಿ ಈಡಿ ರಾಜ್ಯದಾದ್ಯಂತ ಹೆಮ್ಮೆಯಿಂದ ನಮ್ಮ ಸಂವಿಧಾನದ ಮಹತ್ವ ಸಾರಲು ಹಬ್ಬದ ರೀತಿಯಲ್ಲಿ ಜಾಗೃತಿ ಜಾಥಾ ಮಾಡಲಾಗುತ್ತಿದೆ.

ಧಾರವಾಡ ಜಿಲ್ಲೆಯಲ್ಲಿ ಜನವರಿ 26 ರಂದು ಆರಂಭಗೊಂಡ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಫೆ. 15 ರವರೆಗೆ ಜಿಲ್ಲೆಯ 106 ಗ್ರಾಮಗಳಲ್ಲಿ ಸಂಚರಿಸಿದೆ. ಗ್ರಾಮದ ನಾಗರಿಕರು, ಮಕ್ಕಳು, ಮಹಿಳೆಯರು ಕುಂಭ, ಆರತಿ, ಬೈಕ ರ್ಯಾಲಿ, ಕಾಲ್ನಡಿಗೆ ಜಾಥಾಗಳ ಮೂಲಕ ಸಂಭ್ರಮದಿಂದ ಸ್ತಬ್ಧಚಿತ್ರದ ಟ್ಯಾಬ್ಲೋವನ್ನು ಸ್ವಾಗತಿಸಿ ಹಬ್ಬದಂತೆ ಆಚರಿಸುತ್ತಿದ್ದಾರೆ ಎಂದು ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಧೀಶ ಪಿ.ಎಫ್.ದೊಡ್ಡಮನಿ ಅವರು, ನೆರೆದ ಸಾರ್ವಜನಿಕರಿಗೆ, ವಿಕಲಚೇತನರಿಗೆ ಸಂವಿಧಾನ ಪೀಠಿಕೆ ಬೋಧಿಸಿದರು.

ನಂತರ ಅವರು ಮಾತನಾಡಿ, ವಿಕಲಚೇತನರಿಗೆ, ಮಹಿಳೆಯರಿಗೆ, ಮಕ್ಕಳಿಗೆ ಹಾಗೂ ಸಾಮಾಜಿಕವಾಗಿ, ಆರ್ಥಿಕವಾಗಿ ಶೈಕ್ಷಣಿಕವಾಗಿ ಹಿಂದುಳಿದವರಿಗೆ ಸಾಮಾಜಿಕ ನ್ಯಾಯ ಮತ್ತು ಸಮಾನತೆ ಸೀಗಲು ಭಾರತದ ಸಂವಿಧಾನವೇ ಕಾರಣವಾಗಿದೆ. ಪ್ರತಿಯೊಬ್ಬರು ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಬದುಕಬೇಕು ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕ ಅಲ್ಲಾಬಕಾಷ್ ಎಂ.ಎಸ್.ಅವರು ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ವಿಕಲಚೇತನರ ಕಲ್ಯಾಣ ಅಧಿಕಾರಿ ಜಗದೀಶ.ಕೆ. ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

*ಕಲಾತಂಡದೊಂದಿಗೆ ಜರುಗಿದ ಬೈಕ್ ರ್ಯಾಲಿ:* ವಿವಿಧ ತಾಲೂಕುಗಳಿಂದ ಆಗಮಿಸಿದ್ದ ವಿಲಕಚೇತನರು ತಮ್ಮ ಬೈಕ್ಗಳ ಮೂಲಕ ಕೆಸಿಡಿ ಕಾಲೇಜು ಮೈದಾನದಿಂದ ಬೈಕ್ ರ್ಯಾಲಿ ಆರಂಭಿಸಿದರು.

ಬೈಕ ರ್ಯಾಲಿಯು ಕಾಲೇಜು ರಸ್ತೆ ಮೂಲಕ ಆಲೂರು ವೆಂಕಟರಾವ ಸರ್ಕಲ್, ಹಳೆ ಬಸ್ ನಿಲ್ದಾಣದಿಂದ ಡಾ.ಬಿ.ಆರ್.ಅಂಬೇಡ್ಕರ ವೃತ್ತದಲ್ಲಿ ಡಾ.ಬಿ.ಆರ್.ಅಂಬೇಡ್ಕರ ಅವರ ಪುತ್ಥಳಿಗೆ ಮಾಲಾರ್ಪಣೆ ಮೂಲಕ ಮುಕ್ತಾಯಗೊಂಡಿತು. ಬೈಕ್ ರ್ಯಾಲಿಯೊಂದಿಗೆ ಕೆಲಗೇರಿಯ ಜಗ್ಗಲಗಿ ಮೇಳ ಸಂಚರಿಸಿ, ಸಾರ್ವಜನಿಕರ ಗಮನ ಸೇಳೆಯಿತು.

## ಇಂದಿರಾ ಕ್ಯಾಂಟೀನ್ ಅಷ್ಟೆ ಅಲ್ಲ.. ಗ್ರಾಮೀಣ ಪ್ರದೇಶದಲ್ಲಿ ಕೆಫೆ ಸಂಜೀವಿನಿ ಘೋಷಿಸಿದ ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಆಹಾರ ನೀಡಲು 'ಕೆಫೆ ಸಂಜೀವಿನಿ' ಯೋಜನೆ ಜಾರಿ ಮಾಡೋದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ಕೆಫೆ ಸಂಜೀವಿನಿ ಯೋಜನೆ ಅಡಿಯಲ್ಲಿ ಮಹಿಳೆಯರಿಗೆ ಹೋಟೆಲ್ಗಳ ಸ್ಥಾಪನೆಗೆ ಅವಕಾಶ ಮಾಡಿಕೊಡಲಾಗುತ್ತದೆ. ಆಯ್ದ ಗ್ರಾಮೀಣ ಪ್ರದೇಶದಲ್ಲಿ 50 ಕೆಫೆ ಸಂಜೀವಿನಿ ಹೋಟೆಲ್ ತೆರೆಯಲು ನಿರ್ಧರಿಸಲಾಗಿದೆ. ಇದನ್ನು ಸಂಪೂರ್ಣವಾಗಿ ಮಹಿಳೆಯರೇ ನಡೆಸಿಕೊಂಡು ಹೋಗಲಾಗುತ್ತದೆ. ಗ್ರಾಮೀಣ ಪ್ರದೇಶದ ಜನರಿಗೆ ಉತ್ತಮ ಆಹಾರ ಸಿಗುವ ಉದ್ದೇಶದಿಂದ ಈ ಯೋಜನೆ ಆರಂಭವಾಗುತ್ತಿದೆ.

ಇದರ ಜೊತೆಗೆ ವಿದ್ಯಾರ್ಥಿನಿ ಮತ್ತು ಉದ್ಯೋಗಸ್ಥ ಮಹಿಳೆಯರಿಗೆ 5 ನಗರಗಳಲ್ಲಿ ಹಾಸ್ಟೆಲ್ಗಳ ನಿರ್ಮಾಣ ಮಾಡುವ ಉದ್ದೇಶವನ್ನೂ ಸರ್ಕಾರ ಇಟ್ಟುಕೊಂಡಿದೆ. ಕೋಳಿ, ಕುರಿ, ಮೇಕೆ ಸಾಕಾಣೆ ಮತ್ತು ಮಾರುಕಟ್ಟೆಗೆ 100 ಕೋಟಿ ರೂಪಾಯಿ ಹಣವನ್ನು ಸಿದ್ದರಾಮಯ್ಯ ಮೀಸಲಿಟ್ಟಿದ್ದಾರೆ.

## ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ ಶೀಘ್ರವೇ ಆರಂಭವಾಗಲಿದೆ ಚಿರತೆ ಸಫಾರಿ

ಬೆಂಗಳೂರು: ಎಲ್ಲವೂ ಅಂದುಕೊಂಡಂತೆ ನಡೆದಿದ್ದರೇ ಬಹು ನಿರೀಕ್ಷಿತ ಚಿರತೆ ಸಫಾರಿ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಶೀಘ್ರದಲ್ಲೇ ಪ್ರಾರಂಭವಾಗಲಿದೆ.

ಸಿಂಹ ಮತ್ತು ಹುಲಿ ಸಫಾರಿ ಮಾದರಿಯಲ್ಲಿ ಚಿರತೆ ಸಫಾರಿಯನ್ನು ಶೀಘ್ರ ಆರಂಭಿಸುವಂತೆ ಅರಣ್ಯ, ಪರಿಸರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಗುರುವಾರ ಅರಣ್ಯ ಇಲಾಖೆ ಮತ್ತು ಮೃಗಾಲಯ ನಿರ್ವಹಣಾ ಅಧಿಕಾರಿಗಳಿಗೆ ಸೂಚಿಸಿದರು.

ಆದರೆ ಪ್ರಾಣಿಗಳು ಎಷ್ಟು ವೇಗವಾಗಿ ತರಬೇತಿ ಪಡೆಯುತ್ತವೆ ಎಂಬುದರ ಮೇಲೆ ಇದು ಅವಲಂಬಿತವಾಗಿದೆ, ಎಲ್ಲವೂ ಸರಿಯಾಗಿ ನಡೆದರೆ ಒಂದೂವರೆ ತಿಂಗಳ ಅವಧಿಯಲ್ಲಿ ಸಫಾರಿಯನ್ನು ಜನರಿಗೆ ತೆರೆಯಬಹುದು ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದ್ದಾರೆ.

ಆದರೆ ಮಾದರಿ ನೀತಿ ಸಂಹಿತೆ ಜಾರಿಯಾಗಲಿದೆ, ಮೇ ತಿಂಗಳಲ್ಲಿ ಅಥವಾ ನೀತಿ ಸಂಹಿತೆ ಹಿಂಪಡೆದ ಬಳಿಕ ಜನರಿಗೆ ಮುಕ್ತವಾಗಲಿದೆ ಎಂದು ಹೆಸರು ಹೇಳಲಿಚ್ಚಿಸದ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದರು.

ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ ಸಫಾರಿಗಾಗಿ ತನ್ನ ಪ್ರದೇಶದಲ್ಲಿ 20 ಹೆಕ್ಟೇರ್ ಭೂಮಿಯನ್ನು ನಿರ್ಮಿಸಲಾಗಿದೆ.

ಎತ್ತರದ ಮೆಶ್ ಸ್ಥಾಪಿಸಿದೆ ಮತ್ತು ಎತ್ತರದ ಮರಗಳನ್ನು ಬೇಲಿಯಿಂದ ದೂರವಿಡಲಾಗಿದೆ. ಪ್ರಾಣಿಗಳು ತಪ್ಪಿಸಿಕೊಳ್ಳಲು ಯಾವುದೇ ಅವಕಾಶ ನೀಡಿಲ್ಲ.

# ಸವಿತಾ ಮಹರ್ಷಿಗಳ ಪ್ರೇರಣೆಯಿಂದ ಸಮಾಜದಲ್ಲಿ ಬದಲಾವಣೆ




ಧಾರವಾಡ: ಯಾವುದೇ ಸಮಾಜದ ಪ್ರಗತಿಗೆ ಸಂಘಟಣೆ ಮಹತ್ವದಾಗಿರುತ್ತದೆ. ಸವಿತಾ ಮಹರ್ಷಿಗಳ ಸಂದೇಶ ಮತ್ತು ಪ್ರೇರಣೆಯಿಂದ ಸವಿತಾ ಸಮಾಜದಲ್ಲಿ ಸಾಕಷ್ಟು ಬದಲಾವಣೆಯಾಗಿದೆ. ಶಿಕ್ಷಣ ಮತ್ತು ಸಂಸ್ಕಾರಕ್ಕೆ ಆದ್ಯತೆ ನೀಡಲಾಗಿದೆ ಎಂದು ಧಾರವಾಡ ತಹಶೀಲ್ದಾರ ಡಾ. ಡಿ.ಎಚ್. ಹೂಗಾರ ಅವರು ಹೇಳಿದರು.

ಅವರು ಫೆ.16 ಬೆಳಿಗ್ಗೆ ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಸಹಕಾರದಲ್ಲಿ ಆಯೋಜಿಸಿದ್ದ ಶ್ರೀ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಇಂದು ಅನೇಕ ಸಮಾಜಗಳಲ್ಲಿ ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡುತ್ತಿರುವುದರಿಂದ ಸಾಮಾಜಿಕ ಬದಲಾವಣೆ ಹಾಗೂ ಉದ್ಯೋಗಗಳಲ್ಲಿ ವೈವಿಧ್ಯತೆ ಎದ್ದು ಕಾಣುತ್ತಿದೆ. ಇದರಿಂದಾಗಿ ಎಲ್ಲರಲ್ಲೂ ಸಮಾನತೆ ಮೂಡುತ್ತಿದ ಎಂದು ಹೇಳಿದರು. ಪಾರಂಪರಿಕ ಅಥವಾ ಕುಲಕಸಬು ಹೆಸರಿನಲ್ಲಿ ಆಗುತ್ತಿದ್ದ ಶೋಷಣೆ, ಸಾಮಾಜಿಕ ಅಸಾಮನತೆ ಇಂದು ಕಡಿಮೆಯಾಗಿದೆ. ಜನರಲ್ಲಿ ಉದ್ಯೋಗವು ಐಚ್ಚಿಕ ಆಯ್ಕೆಯಾಗಿದೆ ಎಂದು ತಹಶೀಲ್ದಾರ ಹೂಗಾರ ಅವರು ತಿಳಿಸಿದರು.

ಬಾಗಲಕೋಟೆ ರನ್ನಬೇಳಗಲಿಯ ಯೋಗ ಶಿಕ್ಷಕ ಹಾಗೂ ಉಪನ್ಯಾಸಕ ರಾಘವೇಂದ್ರ ನೀಲನ್ನವರ ಅವರು ಶ್ರೀ ಸವಿತಾ ಮಹರ್ಷಿಗಳ ಕುರಿತು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾಜದ ಮುಖಂಡರಾದ ಕೃಗಣ್ಣ ಎಂ ಉಪ್ಪೇರ, ಪರಶುರಾಮ ಬದ್ದೆಪಲ್ಲಿ, ಮೋಹನ ಗೋಲಿ, ಎಂ ವಿಜಯ ಭಾಸ್ಕರ, ಹಿರಿಯರು, ನಾಗರಿಕರು, ಉಪಸ್ಥಿತರಿದ್ದರು.

# ಹುಕ್ಕೇರಿ ತಾಪಂಗೆ ಇಒ ಆಗಿ ಮಲ್ಲಾಡದ ಅಧಿಕಾರ ಸ್ವೀಕಾರ



ಹುಕ್ಕೇರಿ: ಇಲ್ಲಿನ ತಾಲೂಕು ಪಂಚಾಯಿತಿಯ ನೂತನ ಕಾರ್ಯನಿರ್ವಾಹಕ ಅಧಿಕಾರಿ(ಇಒ)ಯಾಗಿ ಟಿ.ಆರ್. ಮಲ್ಲಾಡದ ಅವರು ಶುಕ್ರವಾರ ಅಧಿಕಾರ ಸ್ವೀಕರಿಸಿದರು.

ತಾಪಂ ಕಚೇರಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಇಒ ಆಗಿ ಮಲ್ಲಾಡದ ಅಧಿಕಾರ ಸ್ವೀಕರಿಸಿ ಮಾತನಾಡಿ, ತಾಲೂಕಿನಲ್ಲಿ ಬೇಸಿಗೆ ದಿನಗಳು ಹಾಗೂ ಬರಗಾಲ ನಿರ್ವಹಣೆಯನ್ನು ಪ ರಿ ಣಾ ವ ಂ ಕಾ ರಿ ಂ ು ಾ ಗಿ ನಿರ್ವಹಿಸಲಾಗುವುದು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಎಲ್ಲಾ ಯೋಜನೆಗಳನ್ನು ಇತರೆ ಇಲಾಖೆಗಳ ಸಹಕಾರದೊಂದಿಗೆ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುವುದು. ಈ ಮೂಲಕ ತಾಲೂಕಿನ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದರು.

ಲೋಕಸಭೆ ಚುನಾವಣೆ ಪ್ರಯುಕ್ತ ಇಲ್ಲಿ ಇಒ ಆಗಿ ಕಾರ್ಯ ನಿರ್ವಹಿಸುತ್ತಿದ್ದ ಪ್ರವೀಣ್ ಕಟ್ಟಿ ಅವರು ಹಾವೇರಿ ಜಿಲ್ಲೆ ರಟ್ಟಿಹಳ್ಳಿ ತಾಪಂಗೆ ವರ್ಗಾವಣೆಯಾದ ಪ್ರಯುಕ್ತ ತೆರವಾದ ಈ ಹುದ್ದೆಗೆ ಮಲ್ಲಾಡದ ಅವರನ್ನು ಸರ್ಕಾರ ನಿಯೋಜಿಸಿದೆ.

ಪ್ರಭಾರಿ ವ್ಯವಸ್ಥಾಪಕ ಅವಿನಾಶ ಹೊಳೆಪ್ಪಗೋಳ, ಯೋಜನಾಧಿಕಾರಿ ಪ್ರಶಾಂತ ಮುನ್ನೋಳಿ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ರಾಜು ಢಾಂಗೆ, ಉದ್ಯೋಗ ಖಾತರಿ ಸಹಾಯಕ ನಿರ್ದೇಶಕ ಪಿ. ಲಕ್ಷ್ಮೀನಾರಾಯಣ, ಸಿಬ್ಬಂದಿಗಳಾದ ಶಂಕರ ಕಾಂಬಳೆ, ಎನ್. ಎಸ್ .ಕುಲಕರ್ಣಿ, ಆರ್ .ಎನ್ .ವಂಜಿರೆ, ನಾಗಲಿಂಗ ಮಾಳಗೆ, ಆಶಾರಾಣಿ ಪಾಟೀಲ, ಎಸ್. ಎಸ್ .ದುರ್ಗಾಯಿ, ಶಂಕರ ಶಿರಗುಪ್ಪಿ, ಮಹಾಂತೇಶ ಬಾದವಾನಮಠ, ಶೇಖರ ಢಂಗೆ ಮತ್ತಿತರರು ಉಪಸ್ಥಿತರಿದ್ದರು.

### ಪ್ರವಾಸೋದ್ಯಮಕ್ಕೆ ಆದ್ಯತೆ ನೀಡುವ ನಿಟ್ಟಿನಲ್ಲಿ ರಾಜ್ಯ ಸರಕಾರದ ಬಜೆಟ್



ಬೆಳಗಾವಿ: ಬೆಳಗಾವಿ ಜಿಲ್ಲೆಗೆ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡುವ ನಿಟ್ಟಿನಲ್ಲಿ ರಾಜ್ಯ ಸರಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್ ಮಂಡಿಸಿದ್ದಾರೆ ಎಂದು ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದ್ದಾರೆ.ಬೆಳಗಾವಿಯು ಗೋಕಾಕ ಜಲಪಾತ ಮತ್ತು ಸವದತ್ತಿ ಯಲ್ಲಮ್ಮನ ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶವನ್ನು ಪ್ರವಾಸೋದ್ಯಕ್ಕೆ ಹೆಚ್ಚಿನ ಒತ್ತು ನೀಡಿ ಅಭಿವೃದ್ಧಿ ಪಡಿಸುವುದು ಹಾಗೂ ಬೆಳಗಾವಿ ನಗರಕ್ಕೆ ಮೇಲ್ಸೇತುವೆ ನಿರ್ಮಾಣಕ್ಕೆ ಅನುದಾನ ಮೀಸಲಿಟ್ಟಿದ್ದು ಸ್ವಾಗತಾರ್ಹ. ಒಟ್ಟಾರೆ, ಬೆಳಗಾವಿ ಜಿಲ್ಲೆಗೆ ಪೂರಕವಾದ ಬಜೆಟ್ ಎಂದು ಶ್ರೀಗಳು ತಿಳಿಸಿದ್ದಾರೆ.


## ಪಟ್ಟಣ ಪಂಚಾಯತ ಬೋರಗಾಂವ

("ಕೆ.ಪಿ.ಪಿ ಪೋರ್ಟಲ್") ಟೆಂಡರ ಪ್ರಕಟಣೆ

**(Notice inviting tender through KPP Portal)**

ಕ್ರ:ಸಂ:ಪಪಂಬೋ;ಲೋಇ:15ನೇ ಹ:2023–24 ದಿನಾಂಕ:14–02–2024

ಬೋರಗಾಂವ ಪಟ್ಟಣ ಪಂಚಾಯತಗೆ ಸನ್ 2023–24ನೇ ಸಾಲಿನ 15ನೇ ಹಣಕಾಸು ಅನುದಾನದಲ್ಲಿ ಅಭಿವೃಧಿ ಕಾಮಗಾರಿಗಳನ್ನು ಕೈಕೋಳ್ಳುವ ಸಲುವಾಗಿ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿಸಲ್ಪಟ್ಟ ಅರ್ಹ ದರ್ಜೆ ಗುತ್ತಿಗೆದಾರರಿಂದ ಐಟಂವಾರು ಶೀಲ ಬಂದ ಟೆಂಡರಗಳನ್ನು KW-1. KW-2 ನಮೂನೆಯಲ್ಲಿ ಆಹ್ವಾನಿಸಲಾಗಿದೆ. ಒಟ್ಟು ಕಾಮಗಾರಿಗಳ ಸಂಖ್ಯೆ 1, ವಿವರಗಳು 1) ಇಂಡೆಂಟ್ ಸಂಖ್ಯೆ :– 5599/call–2 ರೂ. 25.00 ಲಕ್ಷ. (Other) ಈ ಮೇಲೆ ತಿಳಿಸಿದ ಎಲ್ಲ ಕಾಮಗಾರಿಗಳ ಕಾಲಮಿತಿ 3 ತಿಂಗಳು.

| ಅ ನಂ | ವಿವರ | ದಿನಾಂಕ ಮತ್ತು ಸಮಯ |
|---|---|---|
| 1 | ಖಾಲಿ ಟೆಂಡರಗಳನ್ನು Online ಮುಖಾಂತರ ಡೌನಲೋಡ ಮಾಡುವ ದಿನಾಂಕ | 14–02–2024 |
| 2 | ಭರ್ತಿ ಮಾಡಿದ ಟೆಂಡರಗಳನ್ನು Online ಮುಖಾಂತರ ಸ್ವೀಕರಿಸುವ ಕೊನೆಯ ದಿನಾಂಕ | 21–02–2024 @4.00 |
| 3 | Technical Bid ತೆರೆಯುವ ದಿನಾಂಕ | 23–02–2024 @5.00 |
| 4 | Financial Bid ತೆರೆಯುವ ದಿನಾಂಕ | 26–02–2024 @11.00 |
| 5 | Number of days to extend | 2 ದಿನಗಳು |

ಮೇಲ್ಕಾಣಿಸಿದ ಕಾಮಗಾರಿಗಳ ಎಲ್ಲಾ ವಿವರಗಳಿಗಾಗಿ ಕೆ.ಪಿ.ಪಿ ಪೋರ್ಟಲ್ ವೇಬಸೈಟ್ www.kppp.karnataka.gov.in ನಲ್ಲಿ ಅಥವಾ ಪುರಸಭೆ ವೇಬ ಸೈಟ www.boragaontown.mrc.gov.in ರಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/–
ಮುಖ್ಯಾಧಿಕಾರಿ
ಪಟ್ಟಣಪಂಚಾಯತ ಬೋರಗಾಂವ

ಕ್ರ:ಸಂ:ಪಪಂಬೋ;ಲೋಇ:15ನೇ ಹ:2023–24 ದಿನಾಂಕ:14–02–2024 R.o.no 1140



ಕ್ರ.ಸಂ.ಪುಸರಾ/ಸಿ.ಆರ್/15ನೇ.ಹ.ಆ/ಟೆ,ಪ್ರ/2023–24/ ದಿನಾಂಕ: 14–02–2024

**ಅಲ್ಪಾವದಿ ಇ–ಟೆಂಡರ್ ಪ್ರಕಟಣೆ**

॥ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ॥

(ಕರ್ನಾಟಕ ಪಾರದರ್ಶಕ ಅಧಿನಿಯಮ 2000 ರನ್ವಯ)

ರಾಮದುರ್ಗ ಪುರಸಭೆ ವ್ಯಾಪ್ತಿಯಲ್ಲಿ ಸನ್ 2023–24ನೇ ಸಾಲಿನ 15ನೇ ಹಣಕಾಸು ಸಾಮಾನ್ಯ ಮೂಲ ಅನುದಾನದಡಿಯಲ್ಲಿ 200 ಎಚ್.ಪಿ ಪಂಪಸೆಟ್ ಖರೀದಿಸಿ ಪೂರೈಸುವದು. **DMA/2023-24 /OW/ WORK INDENT-14939** ಅಂದಾಜು ಮೊತ್ತ ರೂ 30.00 ಲಕ್ಷಗಳ ಕಾಮಗಾರಿಗಳಿಗೆ ಕೆ.ಡಬ್ಲ್ಯು–1 ಪ್ರಕಾರ ಅರ್ಹ ಪೂರೈಕೆದಾರರು ವಿದ್ಯುತ ಇಲಾಖೆಯಲ್ಲಿ ನೋಂದಾಯಿತ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕಾರಣ ಇಚ್ಛೆಯುಳ್ಳ ಗುತ್ತಿಗೆದಾರರು ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ ಟೆಂಡರ ಸಲ್ಲಿಸಬಹುದು.

* ಟೆಂಡರ್ ಸಲ್ಲಿಸುವ ಮೊದಲು ಗುತ್ತಿಗೆದಾರರು ಅತ್ಯಂತ ಅವಶ್ಯಕವಾಗಿ ಟೆಂಡರುಗಳಿಗೆ ಸಂಬಂಧಿಸಿದಂತೆ ನಿಯಮ ನಿಭಂದಣೆಗಳನ್ನು ಓದಿ ಪಾಲಿಸಬೇಕು.
* ಕೌರಿಸ್ (Quarries/Clarifications) ಸಲ್ಲಿಸಲು ದಿನಾಂಕ: 22–02–2024
* ಭರ್ತಿ ಮಾಡಿದ ಟೆಂಡರಗಳನ್ನು ಅಪಲೋಡ್ (Upload) ಮಾಡುವ ಕೊನೆಯ ದಿನಾಂಕ: 23–02–2024 ಸಾಯಂಕಾಲ: 4:00 ಘಂಟೆಯವರೆಗೆ.
* ಟೆಂಡರಗಳ ತಾಂತ್ರೀಕ್ ಬಿಡ್ ತೆರೆಯುವ ದಿನಾಂಕ : 26–02–2024 ಸಾಯಂಕಾಲ 5:00 ಘಂಟೆಯ ನಂತರ ತೆರೆಯಲಾಗುವುದು.
* ಟೆಂಡರಗಳ ಆರ್ಥಿಕ ಬಿಡ್ ತೆರೆಯುವ ದಿನಾಂಕ: 27–02–2024 ರ ಸಾಯಂಕಾಲ 5:00 ಘಂಟೆಯ ನಂತರ ತೆರೆಯಲಾಗುವುದು.
* ಹೆಚ್ಚಿನ ಮಾಹಿತಿ ಮತ್ತು ಶರತ್ತುಗಳಿಗಾಗಿ Website: www.ramdurgatown.mrc.gov.in & www.eproc.karnataka.gov.in ವೆಬ್ಸೈಟನಲ್ಲಿ ನೋಡಬಹುದು.

ಸಹಿ/–
ಶ್ರೀ ಈರಣ್ಣ ಕೆ. ಗುಡದಾರಿ
ಮುಖ್ಯಾಧಿಕಾರಿ
ಪುರಸಭೆ ರಾಮದುರ್ಗ

ಸಹಿ/–
ಶ್ರೀಮತಿ ಪ್ರಭಾವತಿ ಫಕೀರಪುರ
ಆಡಳಿತಾಧಿಕಾರಿಗಳು ಪುರಸಭೆ
ರಾಮದುರ್ಗ



ಕ್ರ.ಸಂ.ಪುಸರಾ/ಸಿ.ಆರ್/ಪು.ನಿ/ಟೆ,ಪ್ರ/2023–24/ ದಿನಾಂಕ: 13–02–2024

**ಅಲ್ಪಾವದಿ ಇ–ಟೆಂಡರ್ ಪ್ರಕಟಣೆ**

॥ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ॥

(ಕರ್ನಾಟಕ ಪಾರದರ್ಶಕ ಅಧಿನಿಯಮ 2000 ರನ್ವಯ)

ರಾಮದುರ್ಗ ಪುರಸಭೆ ವ್ಯಾಪ್ತಿಯಲ್ಲಿ ಸನ್ 2024–25ನೇ ಸಾಲಿನ ಪುರಸಭೆ ನಿಧಿ ಅನುದಾನದಡಿಯಲ್ಲಿ ಹೊರಗುತ್ತಿಗೆ ನೀರು ಸರಬರಾಜು ನಿರ್ವಹಣೆ ಸಹಾಯಕರನ್ನು ಪೂರೈಸುವದು **DMA/2023-24 /SE-2178** ಅಂದಾಜು ಮೊತ್ತ ರೂ 29.50 ಲಕ್ಷಗಳು ಕಾಮಗಾರಿಗಳಿಗೆ ಕೆ.ಸಿ–8 ಪ್ರಕಾರ ಅರ್ಹ ನೋಂದಾಯಿತ ಪೂರೈಕೆದಾರರು/ನೋಂದಾಯಿತ ಮಾನವ ಸಂಪನ್ಮೂಲ ಸಂಸ್ಥೆಗಳಿಗೆ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕಾರಣ ಇಚ್ಛೆಯುಳ್ಳ ಗುತ್ತಿಗೆದಾರರು ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ ಟೆಂಡರ ಸಲ್ಲಿಸಬಹುದು.

* ಟೆಂಡರ್ ಸಲ್ಲಿಸುವ ಮೊದಲು ಗುತ್ತಿಗೆದಾರರು ಅತ್ಯಂತ ಅವಶ್ಯಕವಾಗಿ ಟೆಂಡರುಗಳಿಗೆ ಸಂಬಂಧಿಸಿದಂತೆ ನಿಯಮ ನಿಭಂದಣೆಗಳನ್ನು ಓದಿ ಪಾಲಿಸಬೇಕು.
* ಕೌರಿಸ್ (Quarries/Clarifications) ಸಲ್ಲಿಸಲು ದಿನಾಂಕ: 22–02–2024
* ಭರ್ತಿ ಮಾಡಿದ ಟೆಂಡರಗಳನ್ನು ಅಪಲೋಡ್ (Upload) ಮಾಡುವ ಕೊನೆಯ ದಿನಾಂಕ: 26–02–2024 ಸಾಯಂಕಾಲ: 4:00 ಘಂಟೆಯವರೆಗೆ.
* Pre-Qualification Bid ಬಿಡ್ ತೆರೆಯುವ ದಿನಾಂಕ: 27–02–2024 ಸಾಯಂಕಾಲ 5:00 ಘಂಟೆಯ ನಂತರ ತೆರೆಯಲಾಗುವುದು.
* ಟೆಂಡರಗಳ ತಾಂತ್ರೀಕ್ ಬಿಡ್ ತೆರೆಯುವ ದಿನಾಂಕ : 28–02–2024 ಸಾಯಂಕಾಲ 5:00 ಘಂಟೆಯ ನಂತರ ತೆರೆಯಲಾಗುವುದು.
* ಟೆಂಡರಗಳ ಆರ್ಥಿಕ ಬಿಡ್ ತೆರೆಯುವ ದಿನಾಂಕ: 27–02–2024 ರ ಸಾಯಂಕಾಲ 5:00 ಘಂಟೆಯ ನಂತರ ತೆರೆಯಲಾಗುವುದು.
* ಹೆಚ್ಚಿನ ಮಾಹಿತಿ ಮತ್ತು ಶರತ್ತುಗಳಿಗಾಗಿ Website: www.ramdurgatown.mrc.gov.in & www.eproc.karnataka.gov.in ವೆಬ್ಸೈಟನಲ್ಲಿ ನೋಡಬಹುದು.

ಸಹಿ/–
ಶ್ರೀ ಈರಣ್ಣ ಕೆ. ಗುಡದಾರಿ
ಮುಖ್ಯಾಧಿಕಾರಿ
ಪುರಸಭೆ ರಾಮದುರ್ಗ

ಸಹಿ/–
ಶ್ರೀಮತಿ ಪ್ರಭಾವತಿ ಫಕೀರಪುರ
ಆಡಳಿತಾಧಿಕಾರಿಗಳು ಪುರಸಭೆ
ರಾಮದುರ್ಗ

## ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024–25 ನೇ ಸಾಲಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗಳ 6 ನೇ ತರಗತಿಗಳಿಗೆ ಪ್ರವೇಶ ಪಡೆಯಲು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್, ಪಾರ್ಸಿ, ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿತ ವರ್ಗಗಳ ಅರ್ಹ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಹಾಗೂ ಪಾಲಕರು ಮಾ.15 ರ ಒಳಗಾಗಿ ಸೇವಾ ಸಿಂಧು ಪೋರ್ಟಲ್ ಲಿಂಕ್ https://sevasindhuservices.karnataka.gov.in ಮುಖಾಂತರ ಅರ್ಜಿ ಸಲ್ಲಿಸಬಹುದು. ಇತರೆ ವಿವರಗಳನ್ನು https://dom.karnataka.gov.in ಲಿಂಕ್‌ನಲ್ಲಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಮ್ಮ ಸಮೀಪದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಹಾಗೂ ಜಿಲ್ಲಾ ಅಥವಾ ತಾಲ್ಲೂಕು ಕಛೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧೀಕಾರಿಗಳು ಡಾ. ಅಬ್ದುಲರಶೀದ ಮಿರ್ಜನ್ನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

ಬೆಳಗಾವಿ: 110 ಕೆವಿ ನೆಹರು ನಗರ ಉಪಕೇಂದ್ರ ಮತ್ತು 33ಕೆವಿ ಸದಾಶಿವ ನಗರದಲ್ಲಿ 4 ನೇ ತ್ರೈಮಾಸಿಕ ಕೆಲಸ ನಿರ್ವಹಿಸುವ ಸಲುವಾಗಿ ವಿದ್ಯುತ್ ಉಪಕೇಂದ್ರದಿಂದ ಬೆಳಗಾವಿ ನಗರದ ಕೆಲವು ನಗರದಲ್ಲಿ ಫೆ.18 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಎಫ್1 ಇಂಡಾಲದ ಇಂಡಸ್ಟ್ರೀಯನ್ ಏರಿಯಾ, ಸದರಿ ಫೀಡರ ಮೇಲೆ ಬರುವ ಇಲ್ಲಾ ಪ್ರದೇಶಗಳು. ವೈಭವ ನಗರ, ನ್ಯೂ ವೈಭವ ನಗರ, ವಿದ್ಯಾಗಿರಿ, ಅನ್ನಪೂರ್ಣವಾಡಿ, ಬಸವ ಕಾಲೋನಿ, ಅಜಮ್ ನಗರ, ಸಂಗಮೇಶ್ವರ ನಗರ, ಕೆಎಲ್‌ಇ ಏರಿಯಾ, ಶಾಹುನಗರ, ವಿನಾಯಕ ನಗರ, ಜ್ಯೋತಿ ನಗರ, ಎಪಿಎಂಸಿ, ಉಷಾ ಕಾಲೋನಿ, ಸಿದ್ದೇಶ್ವರ ನಗರ, ಬಾಕ್ಸೈಟರೋಡ, ಇಂಡಾಲ ಏರಿಯಾ ಸಿವಿಲ್ ಹಾಸ್ಪಿಟಲ್ ಏರಿಯಾ, ಅಂಬೇಡ್ಕರ್ ನಗರ, ಚೆನ್ನಮ್ಮಾ ಸರ್ಕಲ್, ಕಾಲೇಜ ರೋಡ, ಡಿಸ್ಟ್ರಿಕ್ಟ ಕೋರ್ಟ್, ಡಿಸಿ ಕಂಪೌಂಡ ಏರಿಯಾ, ಸಿಟಿ ಪೊಲೀಸ್ ಲೈನ್, ಕಾಕತಿವೇಸ ಕಾಳೀ ಅಂಬ್ರಾಯಿ, ಕ್ಲಬ್ ರೋಡ, ಶಿವಬಸವ ನಗರ, ರಾಮನಗರ, ಗ್ಯಾಂಗವಾಡಿ, ಅಯೋಧ್ಯಾನಗರ, ಕೆಎಲ್‌ಇ ಕಾಂಪ್ಲೇಕ್ಸ, ಕೆಇಬಿ ಕ್ವಾಟರ್ಸ್, ಸುಭಾಶ ನಗರ, ಕಾರ್ಪೋರೇಶನ್ ಆಫೀಸ್, ಪೊಲೀಸ್ ಕಮಿಶನರ್ ಆಫೀಸ್, ಶಿವಾಜಿನಗರ, ವೀರಭದ್ರನಗರ, ಆರ್‌ಟಿಓ ವೃತ್ತ, ತ್ರೀವಣಿ, ರೇಲ್ ನಗರ, ಸಂಪಿಗೆ ರೋಡ, ಸದಾಶಿವನಗರ, ವಿಶ್ವೇಶ್ವರಯ್ಯಾ ನರಗ, ಕ್ಲಬ್ ರೋಡ, ಟಿವಿ ಸೆಂಟರ್, ಪಿ&ಟಿ ಕಾಲೋನಿ,(ಹನುಮಾನ ನಗರ), ಮುರಳಿಧರ ಕಾಲೋನಿ, ಜಿನಾಬಕುಲ ಏರಿಯಾ, ರೋಹನ್ ರೆಸಿಡೆನ್ಸಿ, ಆದಿತ್ಯ ಆರ್ಕೆಡ್ ಕೋಲ್ಲಾಪೂರ ಸರ್ಕಲ್ ಸಿವಲ್ ರಸ್ತೆ, ಸುಭಾಸ್ ನಗರ, ರಾಮದೇವ ಏರಿಯಾ, ಎಪಿ ಆಫೀಸ್ ರಸ್ತೆ, ಹನುಮಾನ ಮಂದಿರ ನೆಹರು ನಗರ ಏರಿಯಾ, ಎಫ್15 ವಿಶ್ವೇರಯ್ಯಾ ನಗರದ ವಿಶ್ವೇಶ್ವರಯ್ಯ ನಗರ, ಹನುಮಾನ ನಗರ, ರೇಲ್ ನಗರ, ಸದಾಶಿವ ನಗರ. 33ಕೆವಿ ಕೆ.ಎಲ್. ಇ.ಹೆಚ್.ಟಿ ಸ್ಥಾವರ, ಇ.ಹೆಚ್ ಸ್ಥಾವರಗಳಲ್ಲಿ ವಿದ್ಯುತ್ ವ್ಯತ್ಯಯ ಆಗಲಿದೆ.

## ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ ಫೆ.17 ರಂದು

ಬೆಳಗಾವಿ: ಹೆಸ್ಕಾಂ ನಗರ ಉಪ–ವಿಭಾಗ–3 ನೆಹರೂ ನಗರ, ಬೆಳಗಾವಿ ಕಛೇರಿಯಲ್ಲಿ ವಿದ್ಯುತ್ ಗ್ರಾಹಕ ಕುಂದು ಕೊರತೆಗಳ ನಿವಾರಣಾ ಸಭೆಯು ಕೆ.ಇ.ಆರ್.ಸಿ. ಹಾಗೂ ಹೆಸ್ಕಾಂ ನಿಗಮ ಕಛೇ–ರಿಯವರ ನಿರ್ದೇಶನಗಳ ಮೇರೆಗೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಕಾ&ಪಾ, ನಗರ ಉಪವಿಭಾಗ–03, ಹುವಿಸಕಂನಿ, ಬೆಳಗಾವಿರವರ ಅಧ್ಯಕ್ಷತೆಯಲ್ಲಿ ಫೆ.17 ರಂದು ಮುಂಜಾನೆ 10:30 ಗಂಟೆಗೆ ಕಾರ್ಯ ಮತ್ತು ಪಾಲನೆ, ನಗರ ಉಪವಿಭಾಗ ನಂ–3 ಕಛೇರಿಯಲ್ಲಿ ಆಯೋಜಿಸಲಾಗಿದೆ. ವಿದ್ಯುತ್ ಗ್ರಾಹಕರು ತಮ್ಮ ಸಮಸ್ಯೆ/ಕುಂದು–ಕೊರತೆಗಳನ್ನು ಈ ಸಭೆಯಲ್ಲಿ ಪರಿಹರಿಸಿಕೊಳ್ಳಬಹುದು ಎಂದು ಕಾರ್ಯ& ಪಾಲನ ನಗರ ಉಪ ವಿಭಾಗ ನಂ–3, ಹುವಿಸಕಂನಿ ಹಾಗೂ ಸಹಾಯಕ ಕಾರ್ಯನಿರ್ವಾಹ ಇಂಜಿನೀಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆಬ್ರವರಿ 2024 ಮಾಹೆಯಲ್ಲಿ ಆಹಾರ ಧಾನ್ಯವನ್ನು ಪಡಿತರಗೆ ವಿತರಣೆ

ಬೆಳಗಾವಿ: ಬೆಳಗಾವಿ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಪ್ರಧಾನ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿಯಲ್ಲಿ ಬಿಡುಗಡೆಯಾದ ಆಹಾರ ಧಾನ್ಯವನ್ನು ಫೆಬ್ರವರಿ 2024 ಮಾಹೆಯಲ್ಲಿ ಫಲಾನುಭವಿಗಳಿಗೆ ಸಾರ್ವಜನಿಕ ವಿತರಣಾ ಪದ್ಧತಿಯಡಿಯಲ್ಲಿ ಪಡಿತರ ವಿತರಣೆ ಮಾಡಲಾಗುವುದು.

ಅಂತ್ಯೋದಯ (ಎಎವೈ) ಪ್ರತಿ ಪಡಿತರ ಚೀಟಿಗೆ ಅಕ್ಕಿ 35 ಕೆ.ಜಿ ಮತ್ತು ಪಿ.ಎಚ್.ಎಚ್ (ಬಿಪಿಎಲ್) ಆದ್ಯತಾ ಪ್ರತಿ ಸದಸ್ಯರಿಗೆ ಅಕ್ಕಿ 5 ಕೆ.ಜಿ ಉಚಿತವಾಗಿ ನೀಡಾಗುವುದು. ಹಾಗೂ ಎನ್‌ಪಿಹೆಚ್‌ಹೆಚ್ (ಎಪಿಎಲ್) (ಆದ್ಯತೇತರ) (ಒಪ್ಪಿತ ಪಡಿತರ ಚೀಟಿ) ಏಕ ಸದಸ್ಯ ಪಡಿತರ ಚೀಟಿಗೆ ಅಕ್ಕಿ 5 ಕೆ.ಜಿ 2 ಮತ್ತು ಹೆಚ್ಚಿನ ಸದಸ್ಯರಿರುವ ಪಡಿತರ ಚೀಟಿಗೆ ಅಕ್ಕಿ–10 ಕೆ.ಜಿ. ಪ್ರತಿ ಕೆ.ಜಿ.ಗೆ ರೂ 15 ಹಾಗೂ ಅಂತರರಾಜ್ಯ ಪೋರ್ಟೆಬಿಲಿಟಿ ಮೂಲಕ ಪಡಿತರ ಪಡೆಯುವವ–ರಿಗೆ ಕೇಂದ್ರ ಸರ್ಕಾರದ ಪಡಿತರ ವಿತರಣಾ ಪ್ರಮಾಣ 5 ಕೆ.ಜಿ ಪ್ರತಿ ಸದಸ್ಯರಿಗೆ ಮತ್ತು ದರ ಪ್ರತಿ ಕೆ.ಜಿ ರೂ 3 ರಂತೆ ಅನ್ವಯಿಸುತ್ತದೆ.

ಜಿಲ್ಲೆಯಲ್ಲಿ 68,147 ಅಂತ್ಯೋದಯ, 10,72,147 ಬಿಪಿಎಲ್ ಹಾಗೂ 3.23,176 ಎಪಿಎಲ್ ಪಡಿತರ ಚೀಟಿಗಳು ಸೇರಿ ಒಟ್ಟು 14,36,375 ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತದೆ.

ಈ ಮಾಹೆ 1ನೇ ತಾರೀಖಿನಿಂದ ತಿಂಗಳ ಕೊನೆಯವರೆಗೆ ಬೆಳಗ್ಗೆ 7 ರಿಂದ ರಾತ್ರಿ 9 ಗಂಟೆಯವರೆಗೆ ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದಸ್ಯರುಗಳು ಇ–ಕೆವೈಸಿ ಮಾಡುವ ಹಾಗೂ ಪಡಿತರ ವಿತರಣೆ ಕಾರ್ಯ ಜರುಗಲಿದೆ, ಕಾರಣ ಪಡಿತರ ಚೀಟಿದಾರರು ಬಯೋ ನೀಡಿದ ತಕ್ಷಣವೇ ಪಡಿತರ ಪಡೆಯಲು ತಿಳಿಸಿದೆ.

ಇ–ಕೆವೈಸಿ ಮಾಡಿಸಲು ಪಡಿತರ ಚೀಟಿದಾರರಿಗೆ ಈ ಮಾಹೆ ಅಂತಿಮ ಗಡುವು ನೀಡಲಾಗಿರುತ್ತದೆ ಹಾಗೂ ಇ–ಕೆವೈಸಿ ಮಾಡಿಸಲು ಪಡಿತರ ಚೀಟಿದಾರರು ಯಾವುದೇ ಶುಲ್ಕ ನೀಡುವಂತಿಲ್ಲ. ಪಡಿತರ ಚೀಟಿದಾರರು ತಮಗೆ ಹಂಚಿಕೆ ಮಾಡಿದ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತಹವರ ಪಡಿತರ ಚೀಟಿಯನ್ನು ರದ್ದುಪಡಿಸಲು ಕ್ರಮವಹಿಸಲಾಗುವುದು. ಕಾಳಸಂತೆಯಲ್ಲಿ ಅನಧಿಕೃತವಾಗಿ ಆಹಾರಧಾನ್ಯವನ್ನು ದಾಸ್ತಾನು/ಸಾಗಾಣಿಕೆ ಮಾಡುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ–1955 ರಡಿ ಕ್ರಮ ಜರುಗಿಸಲಾಗುವುದು.

ಪಡಿತರ ವಿತರಣೆ ಕುರಿತು ಏನಾದರೂ ದೂರುಗಳು ಇದ್ದಲ್ಲಿ, ಸಂಬಂಧಿಸಿದ ತಹಶೀಲ್ದಾರ ಕಚೇರಿ ಅಥವಾ ಜಂಟಿ ನಿರ್ದೇಶಕರ ಕಚೇರಿ ಆಹಾರ ಇಲಾಖೆ ಇವರಿಗೆ ದೂರು ಸಲ್ಲಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಕಾಯ್ದೆಗಳು ಸಮಗ್ರ ಅನುಷ್ಠಾನವಾಗಬೇಕು: ಶಶಿಧರ ಕೋಸಂಬೆ



ಬಳ್ಳಾರಿ: ಮಕ್ಕಳ ಮೇಲಿನ ದೌರ್ಜನ್ಯ, ಬಾಲ್ಯ ವಿವಾಹ, ಬಾಲಕಾರ್ಮಿಕ ಪದ್ಧತಿ ಪ್ರಕರಣಗಳು ಹೆಚ್ಚುತ್ತಿದ್ದು, ಅದರಂತೆ ಅವುಗಳ ತಡೆಗೂ ಕಾಯ್ದೆ–ಕಾನೂನುಗಳಿವೆ. ಅಧಿಕಾರಿಗಳು ಮಕ್ಕಳ ಹಕ್ಕುಗಳು ಹಾಗೂ ಕಾಯ್ದೆಗಳನ್ನು ತಿಳಿದುಕೊಂಡು ಸಂಪೂರ್ಣವಾಗಿ ಅನುಷ್ಠಾನಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ಅವರು ಹೇಳಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಮಕ್ಕಳ ಹಕ್ಕುಗಳು ಮತ್ತು ವಿವಿಧ ಕಾಯ್ದೆಗಳ ಕುರಿತು ಭಾಗೀದಾರ ಇಲಾಖೆಗಳ ಜಿಲ್ಲಾ, ತಾಲ್ಲೂಕು, ಗ್ರಾಮ ಮಟ್ಟದ ಅಧಿಕಾರಿಗಳಿಗೆ ಶುಕ್ರವಾರದಂದು ಜಿಪಂನ ನಜೀರ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಎರಡು ದಿನಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಹಕ್ಕುಗಳ ರಕ್ಷಣೆ, ಬಾಲ ನ್ಯಾಯ ಕಾಯ್ದೆಯ ಮೂಲ ಉದ್ದೇಶವಾಗಿದೆ. ಎಲ್ಲರೂ ತಮ್ಮ ಕಾರ್ಯವ್ಯಾಪ್ತಿ ಅರಿತುಕೊಂಡು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿದಾಗ ಕಾಯ್ದೆಗಳ ಅನುಷ್ಠಾನ ಸಾಧ್ಯ ಎಂದರು.

ಮಕ್ಕಳ ಹಕ್ಕುಗಳ ರಕ್ಷಣೆ, ಬಾಲ ನ್ಯಾಯ ಕಾಯ್ದೆ ಸೇರಿದಂತೆ ಮಕ್ಕಳಿಗೆ ಸಂಬಂಧಿಸಿದ ಕಾಯ್ದೆಗಳ ಅನುಷ್ಠಾನಕ್ಕೆ ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಕಾಯ್ದೆಗಳ ಅನುಷ್ಠಾನಕ್ಕೆ ಎಲ್ಲ ಇಲಾಖೆಗಳ ಸಹಕಾರ ಬಹಳ ಅಗತ್ಯ ಎಂದು ತಿಳಿಸಿದರು.

ಮಕ್ಕಳ ಮೇಲಿನ ದೌರ್ಜನ್ಯ, ಬಾಲ್ಯ ವಿವಾಹ ಪದ್ದತಿ, ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಯೂ ಪ್ರತಿಯೊಬ್ಬ ಅಧಿಕಾರಿಗಳ ಜವಾಬ್ದಾರಿಯಾಗಬೇಕು. ಇಂಥ ಕೃತ್ಯಗಳ ನಿಯಂತ್ರಣಕ್ಕೆ ವಿವಿಧ ಇಲಾಖೆಗಳ ಸಹಕಾರವೂ ಅಗತ್ಯವಾಗಿದೆ. ಇವುಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಇಂಥ ಕಾರ್ಯಾಗಾರ ಅವಶ್ಯಕ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಪ್ರಾಪ್ತೆಯರು ಗರ್ಭಿಣಿಯಾಗುತ್ತಿರುವುದು ವಿಷಾಧಕರ ಸಂಗತಿಯಾಗಿದೆ. ಬಾಲ ನ್ಯಾಯ ಕಾಯ್ದೆ ಹಾಗೂ ಬಾಲ್ಯವಿವಾಹ ನಿಷೇಧ ಕಾಯ್ದೆ ಬಗ್ಗೆ ಸಂಬಂಧಪಟ್ಟ ಇಲಾಖೆಗಳು ಅರಿವು ಮೂಡಿಸಬೇಕು ಎಂದು ಹೇಳಿದರು.

ಮಕ್ಕಳ ಹಕ್ಕುಗಳ ರಕ್ಷಣೆ, ಅವರ ಸರ್ವಾಂಗೀಣ ಅಭಿವೃದ್ಧಿಗೆ ನಮ್ಮ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಸದಾ ಬದ್ಧವಾಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ದೇಶದ ಅಭಿವೃದ್ಧಿಯಲ್ಲಿ ಮಕ್ಕಳಿಗೆ ಗುಣಮಟ್ಟ ಶಿಕ್ಷಣ, ಸಧೃಡ ಆರೋಗ್ಯ, ಸಮಾಜದಲ್ಲಿ ಉತ್ತಮ ಅವಕಾಶಗಳನ್ನು ಕಲ್ಪಿಸುವುದು ಆದ್ಯ ಕರ್ತವ್ಯವಾಗಿದೆ.

ಮಕ್ಕಳ ಹಕ್ಕುಗಳು ಮತ್ತು ಅವುಗಳಿಗೆ ಚ್ಯುತಿ ಉಂಟಾದಾಗ ಬರುವ ಕಾಯ್ದೆಗಳ ಬಗ್ಗೆ ತಿಳಿದುಕೊಂಡಾಗ ಮಾತ್ರ ಅಧಿಕಾ–ರಿಗಳು ತಮ್ಮ ತಮ್ಮ ಕರ್ತವ್ಯಗಳನ್ನು ನಿರ್ವಹಿಸಲು ಸಾಧ್ಯವಾಗುತ್ತದೆ ಎಂದು ಅಭಿಮತ ವ್ಯಕ್ತಪಡಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್.ಕೆ.ಹೆಚ್ ಅವರು ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಂತರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಕೊಪ್ಪಳ ಯೂನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕರಾದ ಡಾ.ಕೆ.ರಾಘವೇಂದ್ರ ಭಟ್ ಅವರು, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ ಕಾಯ್ದೆ–2015), ಪೋಕ್ಸೊ ಕಾಯ್ದೆ–2012, ಬಾಲ್ಯವಿವಾಹ ನಿಷೇಧ ಕಾಯ್ದೆ–2006, ಆರ್ಟಿಐ ಕಾಯ್ದೆ–2009ರ ಕಾಯ್ದೆಗಳ ಕುರಿತು ಕಾರ್ಯಾಗಾರದಲ್ಲಿ ವಿಶ್ಲೇಷಿಸಿದರು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಾಣಾಧಿಕಾರಿ ಹಾಗೂ ಪ್ರಭಾರಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಾಮಕೃಷ್ಣ ನಾಯಕ.ಎಂ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾ–ರಿಗಳು ಉಪಸ್ಥಿತರಿದ್ದರು.

## ಸವಿತಾ ಮಹರ್ಷಿಯವರ ವಿಚಾರಧಾರೆಗಳನ್ನು ಮೈಗೂಡಿಸಿಕೊಳ್ಳಿ: ಮೇಯರ್ ಬಿ.ಶ್ವೇತ



ಬಳ್ಳಾರಿ:ಸವಿತಾ ಮಹರ್ಷಿಗಳು ಸಮಾಜಮುಖಿಯಾಗಿ ಬೆಳೆದು ದಾ–ರಿದೀಪವಾಗಿದ್ದಾರೆ. ಸವಿತಾ ಸಮಾಜವು ಎಲ್ಲ ವರ್ಗದ ಜನರಿಗೂ ತಾರತಮ್ಯವಿಲ್ಲದೆ ಸೇವೆ ನೀಡುತ್ತಿದೆ. ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಈ ಸಮುದಾಯ ಮತ್ತಷ್ಟು ಸದೃಢವಾಗಬೇಕಿದೆ ಎಂದು ಮಹಾನಗರ ಪಾಲಿಕೆಯ ಮಹಾ ಪೌರರಾದ ಬಿ.ಶ್ವೇತ ಅವರು ಅಭಿಪ್ರಾಯ ಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಬಿಡಿಎಎ ಫುಟ್ಬಾಲ್ ಮೈದಾನದ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಸವಿತಾ ಮಹರ್ಷಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕಡಿಮೆ ಜನಸಂಖ್ಯೆ ಹೊಂದಿರುವ ಸವಿತಾ ಸಮಾಜದವರು ಸಂಘಟಿತರಾದರೆ ಮಾತ್ರ ಸಮುದಾಯ ಮುಖ್ಯವಾಹಿನಿಗೆ ಬರಲು ಸಾಧ್ಯ. ಪ್ರತಿಯೊಬ್ಬರೂ ತಾನು ಮಾಡುವ ಕಸುಬಿನ ಮೇಲೆ ಗೌರವ, ನಿಷ್ಠೆ ಇಟ್ಟುಕೊಂಡಾಗ ಬದುಕಿನಲ್ಲಿ ಉತ್ತುಂಗಕ್ಕೇರಲು ಸಾಧ್ಯವಿದೆ. ಸವಿತಾ ಮಹರ್ಷಿ ಅವರ ಹಾದಿಯಲ್ಲಿ ಸಾಗಿ ಆಚ–ಾರ–ವಿಚಾರ ಮೈಗೂಡಿಸಿಕೊಂಡರೆ ಸಮಾಜದಲ್ಲಿ ಸತ್ವ ಜೆಗಳಾಗಬಹುದು ಎಂದು ತಿಳಿಸಿದರು.

ಮಹನೀಯರ ಜಯಂತಿಗಳನ್ನು ಆಚ–ರಿಸುವ ಮೂಲಕ ಸರ್ಕಾರವು ಅವರ ಆದ–ರ್ಶಗಳ ಹಾದಿಯಲ್ಲಿ ನಡೆಯಲು ನಮಗೆ ಬೆಳಕು ತೋರಿಸಿದೆ. ಸವಿತಾ ಸಮಾಜದ ಬಂಧುಗಳು ಮಹರ್ಷಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಬಿ.ಸಿದ್ದಲಿಂಗಪ್ಪ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಪೌರಾಣಿಕ ವ್ಯಕ್ತಿಯಾದ ಸವಿತಾ ಮಹರ್ಷಿಯು ರಥಸಪ್ತಿಯ ದಿನ ಮಾಘ ಮಾಸದ ಶುಕ್ಲ ಪಕ್ಷದಲ್ಲಿ ಜನಿಸಿದವರು. ಧಾರ್ಮಿಕವಾಗಿ ಶಿವನ ಎಡಗಣ್ಣನ್ನು ಚಂದ್ರನಿಗೆ ಬಲಗಣ್ಣನ್ನು ಸೂರ್ಯನಿಗೆ ಹೋಲಿಸಲಾಗುತ್ತದೆ. ಶಿವನ ಬಲಗಣ್ಣಿನಿಂದ ಜನಿಸಿದವನೇ ಸವಿತಾ ಮಹರ್ಷಿ ಎಂದು ಪ್ರತೀ–ತಿಯಿದೆ. ಸವಿತಾ ಸಮಾಜದವರನ್ನು ಸೂರ್ಯ ವಂಶಕ್ಕೆ ಸೇರಿದವರೆಂದು ಹೇಳಬಹುದು ಎಂದರು.

ಕಾರ್ಯಕ್ರಮದಲ್ಲಿ ಕೆ.ಕಲ್ಯಾಣಿ ತಂಡದವರು ವಚನ ಗಾಯನ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಮೇಯರ್ ಬಿ.ಜಾನಕಿ, ಮಾಜಿ ಮೇಯರ್ ಹಾಗೂ ಪಾಲಿಕೆಯ ಸದಸ್ಯೆ ಎಂ.ರಾಜೇಶ್ವರಿ, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್, ಜಿಲ್ಲಾ ಸವಿತಾ ಸಮಾಜ ಸಂಘದ ಅಧ್ಯಕ್ಷ ಸಣ್ಣಗೊಂಡ್ಲ ರಾಕೇಶ್ ಸೇರಿದಂತೆ ಸಮಾಜದ ಮುಖಂಡರು, ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತ–ರಿದ್ದರು.

*ಸಂಭ್ರಮದ ಮೆರವಣಿಗೆ:*

ಸವಿತಾ ಮಹರ್ಷಿ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ಸಂಭ್ರಮದಿಂದ ನಡೆಯಿತು. ಮೆರವಣಿಗೆಯಲ್ಲಿ ವಿವಿಧಸಂಸ್ಕೃತಿ–ಕ ಮಹಾನಗರ ಪಾಲಿಕೆಯ ಮೇಯರ್ ಬಿ.ಶ್ವೇತ ಅವರು ಸವಿತಾ ಮಹರ್ಷಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ನಮನ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯು ಹೊಸ ಜಿಲ್ಲಾಡಳಿತ ಭವನದಿಂದ ಆರಂಭವಾಗಿ ಇಂದಿರಾ ವೃತ್ತ, ಕೆ.ಸಿ.ರಸ್ತೆ, ಮೀನಾಕ್ಷಿ ವೃತ್ತ, ಹಳೇ ತಾಲ್ಲೂಕು ಕಚೇರಿ, ಗಡಿಗಿ ಚೆನ್ನಪ್ಪ ವೃತ್ತದ ಮೂಲಕ ಬಿಡಿಎಎ ಫುಟ್ಬಾಲ್ ಮೈದಾನದ ವೇದಿಕೆ ಸಭಾಂಗಣಕ್ಕೆ ಅಂತ್ಯಗೊಂಡಿತು.

## ಕೆ.ಎಲ್.ಇ. ಡೀಮ್ಡ ವಿಶ್ವವಿದ್ಯಾಲಯ ಸಂಶೋಧನೆ ಮತ್ತು ಅಭಿವೃದ್ಧಿ ಕೋಶ ಉದ್ಘಾಟನೆ



ಬೆಳಗಾವಿ: ಕೆ.ಎಲ್.ಇಉನ್ನತ ಶಿಕ್ಷಣ ಮತ್ತು ಸಂಶೋಧನೆ, ಡೀಮ್ಡ ವಿಶ್ವವಿದ್ಯಾಲಯ ಬೆಳಗಾವಿ ಇದರ ಸಂಶೋಧನೆ ಮತ್ತುಅಭಿವೃದ್ಧಿ ಕೋಶ, ಬೆಳಗಾವಿ (R&D Cell) ದಿನಾಂಕ 16–02–2024ರಂದು ಡಾ. ರಿಚರ್ಡ್‌ಡರ್ಮನ್, ವೈಸ್ ಪ್ರೊವೊಸ್ಟ್, ಗ್ಲೋಬಲ್, ವ್ಯವಹಾರಗಳ ನಿರ್ದೇಶಕರು ಮತ್ತು ಪ್ರಾಧ್ಯಾಪಕರು, ಪ್ರಸೂತಿ ಮತ್ತು ಸ್ತ್ರಿರೋಗ ಶಾಸ್ತ್ರ, ಥಾಮಸ್ ಜಾಫರಸನ್ ವಿಶ್ವವಿದ್ಯಲಾಯ, ಫಿಲಡೆಲ್ಫಿಯಾ, ಯು.ಎಸ್.ಎ. ಇವರಅಮೃತ ಹಸ್ತದಿಂದ ಹಾಗೂ ಕುಲಾಧಿಪತಿ ಡಾ.ಪ್ರಭಾಕರ ಕೋರೆಅವರ ಮಾರ್ಗದರ್ಶನದಲ್ಲಿ ಉದ್ಘಾಟಿಸಲಾಯಿತು.

ಕುಲಪತಿಡಾ. ನಿತಿನಎಂ.ಗಂಗನೆ, ಕುಲಸಚಿವಡಾ. ಎಂ.ಎಸ್.ಗಣಾಚಾರಿ, ಸಂಶೋದನಾ ನಿರ್ದೇಶಕಡಾ. ಎಸ್.ಎಸ್.ಗೌಡರ್, ವಿಶ್ವವಿದ್ಯಾಲಯದ ಅಧಿಕಾ–ರಿಗಳು ಮತ್ತು ಅಂಗ ಸಂಸ್ಥೆಗಳ ಪ್ರಾಂಶುಪಾಲರು ಉಪಸ್ಥಿತರಿದ್ದರು.

ವಿಶ್ವವಿದ್ಯಾಲಯಧನಸಹಾಯಆಯೋಗ (UGC) ಮಾರ್ಗಸೂಚಿಗಳ ಪ್ರಕಾರ ಈ ಕೋಶವನ್ನು 2022ರಲ್ಲಿ ಸ್ಥಾಪಿಸಲಾಗಿದೆ. ಈ ಕೋಶವು ಸಂಶೋಧನಾ ಚಟುವಟಿಕೆಗಳಾದ ಸಂಶೋಧನಾ ನೀತಿ, ಸಹಯೋಗ, ಅನುದಾನ, ಪ್ರಕಟಣೆ, ಆಯ್.ಪಿ.ಆರ್, ಇತ್ಯಾದಿಗಳನ್ನು ಬಲಪಡಿಸುವಉ–ದ್ದೇಶ ಹೊಂದಿದೆ.

## ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀ. ವ್ಯಾಪ್ತಿ ನಿರ್ಬಂಧ ವಿಧಿಸಿ ಡಿಸಿ ಮಿಶ್ರಾ ಆದೇಶ



ಬಳ್ಳಾರಿ: ಜಿಲ್ಲೆಯಾದ್ಯಂತ ಫೆ.18 ರಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶಾತಿಗೆ ಪರೀಕ್ಷೆ ಹಾಗೂ ಸಮಾಜ ಕಲ್ಯಾಣ–ಹಿಂದುಳಿದ ವರ್ಗಗಳ ಇಲಾಖೆಯಿಂದ ಯುಪಿಎಸ್ಸಿ, ಕೆಎಎಸ್, ಗ್ರೂಪ್–ಸಿ, ಎಸ್‌ಎಸ್ಸಿ, ಬ್ಯಾಂಕಿಂಗ್, ಆರ್‌ಆರ್ಬಿ ಹುದ್ದೆಗಳಿಗೆ ನೀಡಲಾಗುವ ತರಬೇತಿಗೆ ಪ್ರವೇಶ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಒಳಗಿನ ಆವರಣವನ್ನು ಸಿ.ಆರ್‌ಪಿ.ಸಿ. ಕಲಂ 144ರ ಮೇರೆಗೆ ನಿರ್ಭಂಧಿತ ಪ್ರದೇಶವೆಂದು ಎಂದು ಜಿಲ್ಲಾ ದಂಡಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದ–ೇಶಿಸಿದ್ದಾರೆ.

ಫೆ.18 ರಂದು ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶಾತಿಗೆ ಪರೀಕ್ಷೆ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ಮತ್ತು ಸಮಾಜ ಕಲ್ಯಾಣ–ಹಿಂದುಳಿದ ವರ್ಗಗಳ ಇಲಾಖೆಯಿಂದ ಯುಪಿಎಸ್ಸಿ, ಕೆಎಎಸ್, ಗ್ರೂಪ್–ಸಿ, ಎಸ್–ಎಸ್ಸಿ, ಬ್ಯಾಂಕಿಂಗ್, ಆರ್‌ಆರ್ಬಿ ಹುದ್ದೆಗಳಿಗೆ ನೀಡಲಾಗುವ ತರಬೇತಿಗೆ ಪ್ರವೇಶ ಪರೀಕ್ಷೆಗಳು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ಹಾಗೂ ಮಧ್ಯಾಹ್ನ 02.30 ರಿಂದ ಸಂಜೆ 04.30 ರ ವರೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವತಿಯಿಂದ ಜಿಲ್ಲೆಯ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಆ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶವನ್ನು ನಿಗಫೀಧಿಸಿದೆ.

ಆಯಾ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನಲ್ಲಿರುವ ಜೆರಾಕ್ಸ್ ಸೆಂಟರ್ ಮತ್ತು ಇಂಟರ್ನೆಟ್ ಸೆಂಟರ್ಗಳನ್ನು ಮುಚ್ಚುವಂತೆಯೂ ಮತ್ತು ಈ ಆದೇಶವು ಪರೀಕ್ಷಾ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ದೇಶದ ಹೆಸರಾಂತ ಆಭರಣ ತಯಾರಕರ ಅತಿದೊಡ್ಡ "ದಿ ಜ್ಯುವೆಲರಿ ಶೋ" ಆಭರಣ ಮೇಳಕ್ಕೆ ಅದ್ದೂರಿ ಚಾಲನೆ

## ಫೆ. 18 ರ ವರೆಗೆ ನಡೆಯುವ ಬಂಗಾರದ ಮೇಳದಲ್ಲಿ ವೈವಿಧ್ಯಮ ವಿನ್ಯಾಸಗಳ ಪ್ರದರ್ಶನ



ಬೆಂಗಳೂರು: ನಗರದ ಶೆರಟನ್ ಹೋಟೆಲ್ ನಲ್ಲಿ ಇಂದಿನಿಂದ ಫೆ. 18 ರವರೆಗೆ ನಡೆಯಲಿರುವ ವೈಭವದ "ದಿ ಜ್ಯುವೆಲರಿ ಶೋ" ಆಭರಣ ಮೇಳಕ್ಕೆ ಅದ್ದೂರಿ ಚಾಲನೆ ದೊರೆತಿದೆ.

ದೇಶದ 40 ಪ್ರಮುಖ, ಪ್ರಶಸ್ತಿ ವಿಜೇತ ಹಾಗೂ ಹೆಸರಾಂತ ಆಭರಣ ತಯಾರಕರು ಭಾಗವಹಿಸಿರುವ ಆಭರಣ ಪ್ರದರ್ಶನ ಮತ್ತು ಮಾರಾಟ ಮೇಳದಲ್ಲಿ ಬಂಗಾರ ಖರೀದಿಗೆ ಉಜ್ವಲ ಅವಕಾಶವಿದೆ. ವಿನ್ಯಾಸ, ಗುಣಮಟ್ಟದ ಆಭರಣಗಳನ್ನು ಕೈಗೆಟುವ ಬೆಲೆಯಲ್ಲಿ ಖರೀದಿಸಲು ಇದು ಸದಾವಕಾಶವಾಗಿದೆ.

ಆಭರಣ ಪ್ರದರ್ಶನಕ್ಕೆ ಚಿತ್ರನಟಿ ನಿಶ್ಚಿಕಾ ನಾಯ್ಡು ಚಾಲನೆ ನೀಡಿದರು. ಸಾಮಾಜಿಕ ಉದ್ದಿಮೆದಾರರಾದ ಪಲ್ಲಿವಿ ಸಿ.ಟಿ. ರವಿ, ಲಕ್ಷ್ಮೀ ಗೋವಿಂದ ರಾಜು, ಉದ್ದಿಮೆದಾರರಾದ ಸ್ವಪ್ನಾ ರೆಡ್ಡಿ, ಕಲಾವಿದರಾದ ಕಲಾ ಗಂಗಾಧರ್, ಫ್ಯಾಷನ್ ಡಿಸೈನರ್ ಅರ್ಪಿತಾ ರಂದೀಪ್, ಭವ್ಯ ಗೌಡ ಮತ್ತು ಜಾನಪದ ಗಾಯಕಿ ದಿವ್ಯಾ ಆಲೂರು ಉಪಸ್ಥಿತರಿದ್ದರು.

ನಂತರ ಮಾತನಾಡಿದ ನಿಶ್ಚಿಕಾ ನಾಯ್ಡು, ಮಾತನಾಡಿ ಮೇಳದಲ್ಲಿ ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ನಾಗ–ರೀಕರಷ್ಟೇ ಅಲ್ಲದೇ ರಾಜ್ಯದ ವಿವಿಧ ಭಾಗಗಳಿಂದ ಗ್ರಾಹಕರು ಆಭರಣ ಖರೀಸುವುದಾಗಿ ಮೇಳದಲ್ಲಿ ಉಜ್ವಲ ಅವಕಾಶವಾಗಿದೆ. ಬಂಗಾರ ಖರೀದಿಸಲು ಇದು ಬಂಗಾರದ ಅವಕಾಶವಾಗಿದೆ. ಇದನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಮನವಿ ಮಾಡಿದರು.

ಈ ಮಹತ್ವದ ಆಭರಣ ಮೇಳವನ್ನು ಗೋಲ್ಡನ್ ಕ್ರೀಪರ್ ಸಂಸ್ಥೆಯ ಜಗದೀಶ ಬಿ.ಎನ್ ಮತ್ತು ಹೇಮಲತಾ ಜಗದೀಶ್ ಆಯೋಜಿಸಿದ್ದಾರೆ.

ಮೇಳದಲ್ಲಿ ಬೆಂಗಳೂರಿನ ಅನನ್ಯ ಜುವೆಲ್ಸ್, ಎಂ.ಪಿ. ಸ್ವರ್ಣ ಮಹಲ್, ನೀಲಕಂಠ, ಪಿ.ಎಂ.ಜೆ ಪ್ರಕಾಶ್ ಜುವೆಲರ್ಸ್, ಸಿಂಹ ಜುವೆಲ್ಲರ್ಸ್, ಶ್ರೀ ಗಣೇಶ್ ಡೈಮಂಡ್ಸ್, ವರಶ್ರೀ, ಕಿಯಾ, ಡಯಾಮ್ಸ್, ಡಿ.ಆರ್.ಎನ್. ವಿವಾಂತ್, ವಿತ್ರಾಗ್, ಶ್ರೀ ಕುಮಾರನ್ ತಂಗಮಳಿಗೈ, ವಂಡರ್ ಡೈಮಂಡ್ಸ್, ರೂಪಂ ಸಿಲ್ವರ್, ಮೈ ಸಿಲ್ವರ್, ಸ್ಯಾಂಚೀಸ್, ಸಿಲ್ವರ್ ಗ್ಯಾಲರಿ, ಮದನ್ ಜೇಮ್ಸ್, ನಿಸ್ವಾದಿತ, ಸ್ಟೈಲ್ ಔರ್, ಹರ್ ಹಮ್, ಔರಾ, ಶ್ರೀಹರಿ ಡೈಯಾಜಮ್ಸ್, ಗೋಲ್ಡ್ ಕ್ಯಾರೇಟ್, ಶ್ರೀ ಗೋಲ್ಡ್ ಪಾರಮನಿ, ಮೆಹ್ತಾ ಬ್ರದರ್ಸ್, ಲೈಮ್ ಲೈಟ್ ಡೈಮಂಡ್ಸ್, ಸ್ವಾಂಜಿನಿ, ಕೊಹೀರಾ, ಬಿ.ಎನ್.ಆರ್. ಡೈಮಂಡ್ಸ್, ಸ್ವಸ್ತ, ನಿತ್ಯಾಸ್, ಸುನಿಲ್ ಜುವೆಲರ್ಸ್, ಶ್ರೀ ಜುವೆಲ್ಸ್, ಬನೇತಿ ಎಕ್ಸ್ ಪೋರ್ಟ್ಸ್, ಪನ್ನ ಜುವೆಲರ್ಸ್, ಕಿಯಾಮ ಕಲೆಕ್ಷನ್ಸ್ ಭಾಗವಹಿಸಿವೆ.

## ತೋಟಗಾರಿಕೆ ಇಲಾಖೆ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024-25ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ತೋಟಗಾರಿಕೆ ಬೆಳೆಗಳಾದ ಬಾಳೆ, ದ್ರಾಕ್ಷಿ, ದಾಳಿಂಬೆ, ಮಾವು, ಅಂಜೂರ, ಡ್ರಾಗನ್ ಹಣ್ಣು, ಗೇರು, ಸ್ಟ್ರಾಬೇರಿ, ಜಾಮುನು, ಪೇರಲ, ಬೆಣ್ಣೆ ಹಣ್ಣು, ಹೈಬ್ರಿಡ್ ತರಕಾರಿ ಹಾಗೂ ವಿವಿಧ ಹೂವು ಬೆಳೆಗಳ ಮೇಲೆ ಸಹಾಯಧನವನ್ನು ನೀಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ಬೆಳೆಗಳ ಅನುಗುಣವಾಗಿ ರೂ. 10,000 ಗಳಿಂದ ರೂ. 30,000 ಪ್ರತಿ ಹೆಕ್ಟೇರ್ ಸಹಾಯಧನವನ್ನು ಹಾಗೂ ನೀರಾವರಿ ವ್ಯವಸ್ಥೆಗಾಗಿ ಸಮುದಾಯ ಕೃಷಿ ಹೊಂಡಕ್ಕೆ ರೂ. 4.00 ರಿಂದ 5.32 ಲಕ್ಷಗಳ ವರೆಗೆ ಹಾಗೂ ವೈಯಕ್ತಿಕ ಕೃಷಿಹೊಂಡಕ್ಕೆ ರೂ. 75,000 ಗಳ ಸಹಾಯಧನ ನೀಡಲಾಗುವುದು.

ಸಂರಕ್ಷಿತ ಬೇಸಾಯ ಪದ್ಧತಿ ಅಳವಡಿಸಿಕೊಂಡು ಪಾಲಿಮನೆ ನಿರ್ಮಿಸಲು ಪ್ರತಿ 10 ಗುಂಟೆಗೆ ರೂ. 4.70 ಲಕ್ಷಗಳ ಹಾಗೂ ಪ್ಲಾಸ್ಟಿಕ್ ಹೊದಿಕೆಗಾಗಿ ರೂ. 16,000 ಪ್ರತಿ ಹೆಕ್ಟೇರ್‌ರಂತೆ ಸಹಾಯಧನವನ್ನು ನೀಡಲಾಗುವುದು. ಅಷ್ಟೇ ಅಲ್ಲದೆ ಕೊಯ್ಲೋತ್ತರ ನಿರ್ವಹಣೆಗಾಗಿ ಪ್ಯಾಕ್‌ಹೌಸ್ ನಿರ್ಮಿಸಿಕೊಳ್ಳಲು ಗರಿಷ್ಠ 2 ಲಕ್ಷ, ಪ್ರಾಥಮಿಕ ಸಂಸ್ಕರಣಾ ಘಟಕ ನಿರ್ಮಿಸಲು ಗರಿಷ್ಠ 10 ಲಕ್ಷ, ಹಣ್ಣು ಮಾಗಿಸುವ ಘಟಕಕ್ಕೆ ಪ್ರತಿ ಟನ್‌ಗೆ ರೂ. 35,000 ರಂತೆ ಗರಿಷ್ಠ 300 ಟನ್ ಸಾಮರ್ಥ್ಯದ ವರೆಗೆ ಪ್ರತಿ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುವುದು. ತರಕಾರಿ ಮತ್ತು ಹಣ್ಣು ಮಾರಾಟ ಮಾಡಲು ತಳ್ಳುವ ಗಾಡಿಗೆ ರೂ. 15,000 ಸಹಾಯಧನವನ್ನು ಮಾರ್ಗಸೂಚಿಯನ್ವಯ ವೆಚ್ಚವನ್ನು ಪರಿಗಣಿಸಿ ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ತಮ್ಮ ತಾಲೂಕಿನ ತೋಟಗಾರಿಕೆ ಇಲಾಖೆಗೆ ಭೇಟಿ ನೀಡಿ ಹೆಚ್ಚಿನ ಮಾಹಿತಿ ಪಡೆದುಕೊಂಡು ಅರ್ಜಿ ಸಲ್ಲಿಸಲು ಬೆಳಗಾವಿ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಹಕರ ಸಂವಾದ ಸಭೆ ಫೆ.17 ರಂದು

ಬೆಳಗಾವಿ: ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಕಾರ್ಯ ಮತ್ತು ಪಾಲನೆ ಉಪವಿಭಾಗ ನಂ.1 ಹುವಿಸಕಂನಿ ಬೆಳಗಾವಿ ಅವರ ಆವರಣದಲ್ಲಿ ಶಾಖೆ ನಂ.2 ಮತ್ತು ನಂ3ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಹಕರಿಗೆ ಫೆ. 17ರಂದು ಮುಂಜಾನೆ 11 ಗಂಟೆಗೆ ನಗರದ ಉಪವಿಭಾಗ ನಂ1 ರ ಕಚೇರಿ ವ್ಯಾಪ್ತಿಯಲ್ಲಿ ಗ್ರಾಹರಕ ಸಂವಾಹ ಸಭೆಯನ್ನು ಆಯೋಜಿಸಲಾಗಿದೆ. ಆದ್ದರಿಂದ ಎಲ್ಲಾ ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ನಗರದ ಉಪ ವಿಭಾಗ ನಂ.1 ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊಸ ಬಸ್ಸುಗಳ ಲೋಕಾರ್ಪಣೆ ಕಾರ್ಯಕ್ರಮ ಫೆ.18 ರಂದು

ಬೆಳಗಾವಿ: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೂತನ ಪರಿಸರ ಸ್ನೇಹಿ ಬಿ.ಎಸ್-6 (ಸುರಕ್ಷತೆಗೆ cc canera & electronic vehicle stability control ನ್ನು ಹಾಗೂ on Bord diagnostics-2 ವ್ಯವಸ್ಥೆ ಹೊಂದಿದ) ಬಸ್ಸುಗಳ ಲೋಕಾರ್ಪಣೆ ಹಾಗೂ ಅಪಘಾತ ರಹಿತ ಚಾಲಕರಿಗೆ ಬೆಳ್ಳಿ ಪದಕ ವಿತರಣಾ ಸಮಾರಂಭವನ್ನು ಫೆ.18 ರಂದು ಬೆಳಗ್ಗೆ 11 ಗಂಟೆಗೆ ಬೆಳಗಾವಿ ಕೇಂದ್ರ ಬಸ್ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಘನ ಉಪಸ್ಥಿತಿ ಇರಲಿದ್ದಾರೆ. ಉತ್ತರ ವಿಧಾನಸಭೆ ಶಾಸಕರಾದ ಆಸೀಫ್(ರಾಜು) ಸೇಠ್ ಅಧ್ಯಕ್ಷತೆ ವಹಿಸಲಿದ್ದಾರೆ. ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷರಾದ ರಾಮಲಿಂಗಾರೆಡ್ಡಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಅತಿಥಿಗಳಾಗಿ ವಿಧಾನಸಭೆ ಸಚೇತಕರು ಅಶೋಕ ಪಟ್ಟಣ, ನವದೆಹಲಿಯ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ಹುಬ್ಬಳ್ಳಿಯ ವಾ.ಕ.ರಾ.ಸಾ.ಸಂಸ್ಥೆಯ ಅಧ್ಯಕ್ಷರಾದ ಭರಮಗೌಡ ಅಲಗೌಡ ಕಾಗೆ, ಹಣಕಾಸು ಸಂಸ್ಥೆಯ ಶಾಸಕ ಮಹಾಂತೇಶ ಕೌಜಲಗಿ, ಜಿಲ್ಲಾ ವ್ಯಾಪ್ತಿಯ ಶಾಸಕರು, ಜನಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು ಹಾಗೂ ಇನ್ನಿತರೆ ಗಣ್ಯರು ಆಗಮಿಸಲಿದ್ದಾರೆ.

### ಅಲ್ಪಸಂಖ್ಯಾತರಿಗೆ ಸ್ವಯಂ ಉದ್ಯೋಗ ಮಾಡುಲು ಸಾಲ ಹಾಗೂ ಸಹಾಯಧನಕ್ಕೆ ಅರ್ಜಿ ಆಹ್ವಾನ

ಬೆಳಗಾವಿ: 2023-24ನೇ ಸಾಲಿಗೆ ಅಲ್ಪಸಂಖ್ಯಾತರ ಜನಾಂಗದವರಾಗಿದ ಮುಸ್ಲಿಂ,ಜೈನ, ಕ್ರಿಶ್ಚಿಯನ್, ಬೌದ್ಧ, ಸಿಖ್ಖ, ಪಾರ್ಸಿ ಸಮುದಾಯದವರು ಸ್ವಯಂ ಉದ್ಯೋಗ ಯೋಜನೆಯಡಿಯಲ್ಲಿ ವ್ಯಾಪಾರ, ಸಣ್ಣ ಪ್ರಮಾಣದ ಗುಡಿ ಕೈಗಾರಿಕೆ, ಸೇವಾ ಕ್ಷೇತ್ರ, ಕೃಷಿ ಆಧಾರಿತ ಚಟುವಟಿಕೆಗಳು ಮುಂತಾದವುಗಳನ್ನು ಪ್ರಾರಂಭಿಸಲು ಸಾಲ ಮತ್ತು ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ಫೆ. 29 ಒಳಗಾಗಿ ವೆಬ್‌ಸೈಟ್ **kmdconline.karnataka.gov.in** ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಬೆಳಗಾವಿಯ ರಾಮತೀರ್ಥ ನಗರದಲ್ಲಿ ಮೌಲಾನಾ ಆಝಾದ ಅಲ್ಪಸಂಖ್ಯಾತರ ಭವನವನಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಅಥವಾ ದೂರವಾಣಿ 0831-2950794 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮ ಪಂಚಾಯತಿಗಳಲ್ಲಿ ಸಂವಿಧಾನ ಜಾಥಕ್ಕೆ ಅದ್ದೂರಿ ಸ್ವಾಗತ

ಬೆಳಗಾವಿ: ಸಂವಿಧಾನದ ಮೌಲ್ಯ ಮತ್ತು ಆಶಯಗಳನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಥಬ್ದ ಚಿತ್ರಗಳನ್ನೊಳಗೊಂಡ ವಿಶೇಷ ರಥಗಳೆರೆಡು ಏಕ ಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿತು.

ಸದರಿ ಕಾರ್ಯಕ್ರಮವನ್ನು ಗಣ-ರಾಜ್ಯೋತ್ಸವದ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಚಾಲನೆಗೊಳ್ಳಿಸಿದ್ದರು.

ಸ್ಥಬ್ದಚಿತ್ರದ ಮೆರವಣಿಗೆಯು ಜಿಲ್ಲಾದ್ಯಾಂತ ಎರಡು ಮಾರ್ಗಗಳ ನಡೆಯಿತು. ಮೊದಲನೆ




ಮಾರ್ಗದರಥವು ಬೆಳಗಾವಿ, ಹುಕ್ಕೇರಿ, ನಿಪ್ಪಾಣಿ, ಚಿಕ್ಕೋಡಿ, ಕಾಗವಾಡ, ಅಥಣಿ, ರಾಯಬಾಗ ತಾಲೂಕುಗಳಲ್ಲಿ ಹಾಗೂ ಎರಡನೇ ಮಾರ್ಗದರಥವು ಗೋಕಾಕ, ಮೂಡಲಗಿ, ರಾಮದುರ್ಗ, ಸವದತ್ತಿ, ಬೈಲಹೊಂಗಲ, ಚನ್ನಮ್ಮನಕಿತ್ತೂರ, ಖಾನಾಪೂರ ತಾಲೂಕುಗಳಿಗೆ ಸ್ಥಬ್ದ ಚಿತ್ರಗಳ ಮೆರವಣಿಗೆಯು ಸಂಚರಿಸಿತು.

ಸಂವಿಧಾನದ ಮೂಲ ಆಶಯಗಳಾದ ಸರ್ವಧರ್ಮಗಳ ಸಮಭಾವ, ಸಮಸ್ತ ನಾಗರೀಕರಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ ಕುರಿತು, ವಿಚಾರ, ಅಭಿವ್ಯಕ್ತಿ, ವಿಶ್ವಾಸ ಮತ್ತು ಧರ್ಮ ಶ್ರದ್ಧೆಯ ಸ್ವಾತಂತ್ರ್ಯತೆಯ ಅರಿವು, ಸ್ಥಾನಮಾನ ಹಾಗೂ ಅವಕಾಶಗಳ ಸಮಾನತೆಯನ್ನು ದೊರಕಿಸಲು, ರಾಷ್ಟ್ರದ ಏಕತೆ ಮತ್ತು ಅಖಂಡತೆಯನ್ನು ಬಲಗೊಳಿಸಲು, ಎಲ್ಲರಲ್ಲೂ ಭಾತೃತ್ವ ಭಾವನೆಯನ್ನು ವೃದ್ಧಿಗೊಳಿಸಲು ಈ ಎಲ್ಲಾ ಆಶಯಗಳನ್ನು ಪ್ರತಿ ಮನೆ-ಮನೆಗಳಿಗೂ, ಮನ-ಮನಗಳಿಗೂ ತಲುಪಿಸುವದು ಈ ಕಾರ್ಯಕ್ರಮದ ಮೂಲ ಧ್ಯೇಯವಾಗಿದೆ.

ಫೆ.15 ರಂದು ಮೊದಲ ಮಾರ್ಗದ ರಥವು ಅಥಣಿ ತಾಲೂಕಿನ ಗುಂಡೆವಾಡಿ, ಪಾರ್ಥನಹಳ್ಳಿ, ಚಮಕೇರಿ, ಅಡಹಳ್ಳಿ, ಹೋಹಳ್ಳಿ, ಕಕಮರಿ, ಕೊಟ್ಟಲಗಿ, ಕನ್ನಲಾ, ತೇಲಸಂಗ, ಅರಟಾಳ ಮತ್ತು ಐಗಳಿ ಗ್ರಾಮ ಪಂಚಾಯತಿ ಮೂಲಕ ಸಂಚರಿಸಿ ಫೆ.16 ರಂದು ಅಥಣಿ ತಾಲೂಕಿನ ಎಲಿ ಹಡಗಲಿ, ಬಡಚಿ, ಕಟಗೇರಿ, ಕೊಕಟನೂರ, ಸುಟ್ಟಟ್ಟಿ, ಜಂಬರವಾಡಿ, ನಂದಗಾಂವ, ಶಿರಹಟ್ಟಿ, ಸವದಿ, ರಡ್ಡೇರಟ್ಟಿ ಮತ್ತು ನಾಗನೂರ ಪಿ.ಕೆ ಗ್ರಾಮ ಪಂಚಾಯತಿಗಳಿಗೆ ತೆರಳಿತು.

ಅದೇ ರೀತಿಯಾಗಿ ಎರಡನೇ ಮಾರ್ಗ ದರಥವು ಕಿತ್ತೂರ ತಾಲೂಕಿನ ಹಿರೇನಂದಿಹಳ್ಳಿ, ಕಲಬಾವಿ, ತುರಮುರಿ, ಹುಣಸಿಕಟ್ಟಿ, ಕಾದ್ರೋಳಿ, ಎಂ.ಕೆ. ಹುಬ್ಬಳಿ, ದಾಸ್ತಿಕೊಪ್ಪ, ವೀರಾಪೂರ, ಡಿ.ಶೀಗೇಹಳ್ಳಿ ಮತ್ತು ಅಂಬಡಗಟಿ ಗ್ರಾಮ ಪಂಚಾಯತಿಗಳ ಮೂಲಕ ಸಂಚರಿಸಿ ಕಿತ್ತೂರ ತಾಲೂಕಿನ ತಿಗಡೊಳ್ಳಿ, ಕಿತ್ತೂರ, ಕುಲವಳ್ಳಿ, ದೇಗಾಂವ್, ಬೈಲೂರ ಹಾಗೂ ಖಾನಾಪೂರ ತಾಲೂಕಿನ ಕೇರವಾಡ, ಲಿಂಗನಮಠ ಮತ್ತು ಗೊದೋಳಿ ಗ್ರಾಮ ಪಂಚಾಯತಿಗಳಿಗೆ ತೆರಳಿತು.

ಸಂವಿಧಾನ ಜಾಗೃತಿ ಜಾಥದಲ್ಲಿ ಅಧಿಕ ಸಂಖ್ಯೆಯಲ್ಲಿ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಗ್ರಾಮದ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು, ಸ್ವ-ಸಹಾಯ ಸಂಘಗಳು, ಮತ್ತು ಸಾರ್ವಜನಿಕರು ಭಾಗವಹಿಸುವಿಕೆಯಿಂದ "ಸಂವಿಧಾನ ಜಾಗೃತಿ ಜಾಥವನ್ನು ಯಶಸ್ವಿಗೊಳಿಸಲಾಯಿತು.

## ಸವಿತಾ ಮಹರ್ಷಿ ಜಯಂತಿ ಉತ್ಸವ -2024

# ಸಮಾಜದ ಪ್ರತಿಯೊಂದು ವೃತ್ತಿಯನ್ನು ಗೌರವದಿಂದ ಕಾಣಬೇಕು: ಡಾ.ಸಿ.ಕೆ.ನಾವಲಗಿ

ಬೆಳಗಾವಿ: ಆದಿ ಕಾಲದಿಂದಲೂ ಸಮಾಜ ಸುಧಾರಣೆ ಶ್ರಮಿಸಿದ ಮಹನೀಯರ ಕಾರ್ಯಗಳನ್ನು ನಾವು ಇಂದಿಗೂ ಸ್ಮರಿಸುತ್ತೇವೆ. ವೃತ್ತಿಯಲ್ಲಿ ಮೇಲು ಕೀಳು ಎನ್ನದೆ ಎಲ್ಲ ವೃತ್ತಿಗಳನ್ನು ಗೌರವದಿಂದ ನೋಡಬೇಕು. ಉತ್ತಮ ಸಮಾಜ ನಿರ್ಮಾಣ-ಕ್ಕೆ ಪ್ರತಿಯೊಬ್ಬರೂ ಕೈಜೋಡಿಸುವಂತಾಗಬೇಕು. ಸವಿತಾ ಸಮಾಜದವರು ಶೈಕ್ಷಣಿಕ, ಆರ್ಥಿಕ, ಸಾಮಾಜಿಕವಾಗಿ ಮುಂದೆ ಬರಬೇಕು ಎಂದು ಡಾ. ಸಿ. ಕೆ. ನಾವಲಗಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆಯ ಸಂಯುಕ್ತ ಆಶ್ರಯದಲ್ಲಿ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಶುಕ್ರವಾರ (ಫೆ.16) ನಡೆದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸವಿತಾ ಮಹರ್ಷಿಯು ರಥಸಮ್ತಿಯ ದಿನ ಮಾಘ ಮಾಸದ ಶುಕ್ಲ ಪಕ್ಷದಲ್ಲಿ ಜನಿಸಿದರು. ಶಿವನ




ಎಡಗಣ್ಣನ್ನು ಚಂದ್ರನಿಗೆ ಬಲಗಣ್ಣನ್ನು ಸೂರ್ಯನಿಗೆ ಹೋಲಿಸಲಾಗುತ್ತದೆ. ಶಿವನ ಬಲಗಣ್ಣಿನಿಂದ ಜನಿಸಿದವನೇ ಸವಿತಾ ಮಹರ್ಷಿ ಎಂದು ಸಮಾಜದ ನಂಬಿಕೆಯಾಗಿದೆ.

ಪುರಾಣದ ಪ್ರಕಾರ ಶಿವನು ಅತಿಯಾಗಿ ಬೆಳೆದ ಕೂದಲುಗಳಿಂದ ತೊಂದರೆ ಅನುಭವಿಸುತ್ತಿದ್ದಾಗ ಪಾರ್ವತಿ ದೇವಿಯ ಸಲಹೆಯಂತೆ ತನ್ನ ಎಡಗಣ್ಣಿನಿಂದ ಕ್ಷೌರಿಕರ ಮೂಲಪುರುಷ ಸವಿತಾ ಮಹರ್ಷಿಯನ್ನು ಸೃಷ್ಟಿ ಮಾಡಲಾಯಿತು ಎಂದು ಹೇಳಲಾಗುತ್ತದೆ.

ಶಿವ ನಯನದಿಂದ ಜನಿಸಿದ್ದರಿಂದ ಈ ಜನಾಂಗವನ್ನು ಹಲವಾರು ಹೆಸರುಗಳಿಂದ ಕರೆಯುತ್ತಾರೆ. ಮಹರ್ಷಿಯ ಸೇವೆಯಿಂದ ತೃಪ್ತನಾದ ಶಿವನು ಸಂಗೀತ ಸಾಧನಗಳನ್ನು ನೀಡಿದನು. ಸವಿತಾ ಮಹರ್ಷಿಯು ನಾಲ್ಕು ವೇದಗಳಲ್ಲಿ ಒಂದಾದ ಸಾಮವೇದವನ್ನು (ಸಾಮ ಎಂದರೆ ಸಂಗೀತಾ ಹಾಗೂ ವೇದ ಎಂದರೆ ಜ್ಞಾನ) ರಚಿಸಿದರು.

ಸವಿತಾ ಮಹರ್ಷಿ ಸಮುದಾಯ ಸಮಾಜಿ-ಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಸದೃಡವಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕಿದೆ. ಮೂಢನಂಬಿಕೆಗಳನ್ನು ದೂರವಿಟ್ಟ ಮಹರ್ಷಿಗಳ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಬೆಳಗಾವಿ ಜಿಲ್ಲಾ ಸವಿತಾ ಸಮಾಜದ ಅಧ್ಯಕ್ಷರಾದ ಶೇಖರ ರೆಡ್ಡಿ, ಅಪರ ಜಿಲ್ಲಾಧಿಕಾರಿಗಳಾದ ವಿಜಯ ಕುಮಾರ ಹೊನಕೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ದಲಿತ ಸಮಾಜದ ಮುಖಂಡರಾದ ಮಲ್ಲೇಶ ಚೌಗಲಾ, ಸಮಾಜದ ಮುಖಂಡರಾದ ಗೋಪಿ ಕಡಪಾ, ಗೀತಾ ರೆಡ್ಡಿ, ಆರತಿ ರೆಡ್ಡಿ ಹಾಗೂ ಮತ್ತಿತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಸಂವಿಧಾನ ಜಾಗೃತಿ ಜಾಥಾ: ಬೈಕ್ ರ್‍ಯಾಲಿ

ಮಂಗಳೂರು: ಪುತ್ತೂರು ತಾಲೂಕು ಸಮಾಜ ಕಲ್ಯಾಣ ಇಲಾಖೆ, ನಿಡ್ಪಳ್ಳಿ ಗ್ರಾಮ ಪಂಚಾಯತ್ ಇವರ ಸಂಯುಕ್ತ ಆಶ್ರಯದಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಪುತ್ತೂರು ತಾಲೂಕಿನ ನಿಡ್ಪಳ್ಳಿ ಗ್ರಾಮ ಪಂಚಾಯತ್ಗೆ ಶುಕ್ರವಾರ ಬೆಳಿಗ್ಗೆ ಆಗಮಿಸಿತು.

ವಿವಿಧ ಶಾಲಾ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಂದ ಕಾಲ್ನಡಿಗೆ , ಬೈಕ್ ರ್‍ಯಾಲಿ, ಬಲೂನ್ಗಳನ್ನು ಹಾರಿಸುವ ಮೂಲಕ ಸಂವಿಧಾನ ಜಾಗೃತಿ ಜಾಥಾವನ್ನು ಸ್ವಾಗತಿಸಲಾಯಿತು. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಪುತ್ಥಳಿಗೆ ಹಾರಾರ್ಪಣೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

## ಬೆಳಗಾವಿ ಜಿಲ್ಲೆಯ ವಿಭಜನೆ: ಹುಸಿಯಾದ ಚಿಕ್ಕೋಡಿ ಭಾಗದ ಜನರ ನಿರೀಕ್ಷೆ

ಬೆಳಗಾವಿ: ಬಜೆಟ್‌ನಲ್ಲಿ ಚಿಕ್ಕೋಡಿ ಪ್ರತ್ಯೇಕ ಜಿಲ್ಲೆಯಾಗುವ ನಿರೀಕ್ಷೆಯಲ್ಲಿದ್ದ ಜನ-ರಿಗೆ ನಿರಾಸೆಯಾಗಿದೆ. ಈ ಸಲುವಾಗಿ ಚಿಕ್ಕೋಡಿಯಲ್ಲಿ ಹೋರಾಟ ಸಮಿತಿ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ 30 ವರ್ಷಗಳಿಂದ ಸತತವಾಗಿ ಹೋರಾಟ ಮಾಡಿದರೂ ಸರ್ಕಾರ ಸ್ಪಂದಿಸುವ ಕೆಲಸ ಮಾಡಿಲ್ಲ. ಚಳಿಗಾಲದ ಅಧಿವೇಶನದಲ್ಲಿ ಪ್ರತ್ಯೇಕ ಜಿಲ್ಲೆ ಘೋಷಣೆ ಆಗುತ್ತೆ ಎಂಬ ನಿರೀಕ್ಷೆ ಇತ್ತು. ಜಿಲ್ಲೆಯ ವಿಭಜನೆ ಆಗದೇ ಇರುವುದು ಚಿಕ್ಕೋಡಿ ಭಾಗದ ಜನರ ನಿರೀಕ್ಷೆಯನ್ನು ಹುಸಿಯಾಗಿಸಿದೆ ಎಂದು ಹೋರಾಟಗಾರರು ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಅನಿವಾರ್ಯವಾಗಿದೆ. ಇನ್ನು ಮುಂದೆ ಜನ ಪ್ರತಿನಿಧಿಗಳು ಜಿಲ್ಲಾ ವಿಭಜನೆ ಕುರಿತು ಮಾತನಾಡಬಾರದು. ಮಾತನಾಡಿದರೆ ಅಂತವರ ವಿರುದ್ಧ ಧಿಕ್ಕಾರ ಕೂಗುವ ಕೆಲಸ ಮಾಡುತ್ತೇವೆ. ಜನ ಪ್ರತಿನಿಧಿಗಳ ಮನೆ ಮುಂದೆ ಪ್ರತಿಭಟನೆ ಮಾಡುವ ಕೆಲಸ ಮಾಡುತ್ತೇವೆ ಎಂದು ಹೋರಾಟ ಸಮಿತಿ ಸದಸ್ಯರು ತಮ್ಮ ಆಕ್ರೋಶ ಹೊರಹಾಕಿದ್ದಾರೆ.

# ಗ್ರಾಮ ಪಂಚಾಯತಿಗಳಲ್ಲಿ ಸಂವಿಧಾನಜಾಥ ಕ್ಕೆ ಅದ್ದೂರಿ ಸ್ವಾಗತ

ಬೆಳಗಾವಿ: ಸಂವಿಧಾನದ ಮೌಲ್ಯ ಮತ್ತು ಆಶಯಗಳನ್ನು ಸಾರ್ವಜನಿಕರಲ್ಲಿಅರಿವು ಮೂಡಿಸುವಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ-ಕಲ್ಯಾಣ ಇಲಾಖೆ ಬೆಳಗಾವಿ ಇವರ ಸಂಯುಕ್ತಆಶ್ರಯದಲ್ಲಿಜಿಲ್ಲೆಯಎಲ್ಲಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಥಬ್ದಚಿತ್ರಗಳನ್ನೊಳಗೊಂಡ ವಿಶೇಷ ರಥಗಳೆರೆಡು ಏಕ ಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನಜಾಗೃತಿಜಾಥ ಹಮ್ಮಿಕೊಳ್ಳಲಾಗಿದ್ದು ಸದ-ರಿಕಾರ್ಯಕ್ರಮವನ್ನುಗಣರಾಜ್ಯೋತ್ಸವದ ದಿನದಂದುಜಿಲ್ಲಾಕ್ರೀಡಾಂಗಣದಲ್ಲಿಜಿಲ್ಲಾಉಸ್ತುವಾರಿ ಸಚಿವರಾದ ಮಾನ್ಯ ಶ್ರೀ ಸತೀಶ ಜಾರಕಿಹೊಳಿ ರವ-



ರಿಂದ ಚಾಲನೆಗೊಂಡ ಸ್ಥಬ್ದಚಿತ್ರದ ಮೆರವಣಿಗೆಯುಜಿಲ್ಲಾದ್ಯಾಂತಎರಡು ಮಾರ್ಗಗಳ ಮೂಲಕ "ಮೊದಲನೆ ಮಾರ್ಗದರಥವು ಬೆಳಗಾವಿ, ಹುಕ್ಕೇರಿ, ನಿಪ್ಪಾಣಿ, ಚಿಕ್ಕೋಡಿ, ಕಾಗವಾಡ, ಅಥಣಿ, ರಾಯಬಾಗ ತಾಲೂಕುಗಳಲ್ಲಿ ಹಾಗೂ ಎರಡನೇ ಮಾರ್ಗದರಥವು ಗೋಕಾಕ, ಮೂಡಲಗಿ, ರಾಮದುರ್ಗ, ಸವದತ್ತಿ, ಬೈಲಹೊಂಗಲ, ಚನ್ನಮ್ಮನಕಿತ್ತೂರ, ಖಾನಾಪೂರ ತಾಲೂಕುಗಳಿಗೆ ಸ್ಥಬ್ದ ಚಿತ್ರಗಳ ಮೆರವಣಿಗೆಯು ಸಂಚ-ರಿಸುತ್ತಿದೆ.

ಸಂವಿಧಾನದ ಮೂಲ ಆಶಯಗಳಾದ ಸರ್ವಧರ್ಮಗಳ ಸಮಭಾವ, ಸಮಸ್ತ ನಾಗರೀಕರಿಗೆ ಸಾಮಾಜಿಕ, ಆರ್ಥಿಕ ಮತ್ತುರಾಜಕೀಯ ನ್ಯಾಯಕುರಿತು, ವಿಚಾರ, ಅಭಿವ್ಯಕ್ತಿ, ವಿಶ್ವಾಸ ಮತ್ತು ಧರ್ಮಶ್ರದ್ಧೆಯ ಸ್ವಾತಂತ್ರ್ಯತೆಯ ಅರಿವು, ಸ್ಥಾನಮಾನ ಹಾಗೂ ಅವಕಾಶಗಳ ಸಮಾನತೆಯನ್ನು ದೊರಕಿಸಲು, ರಾಷ್ಟ್ರದಏ-ಕತೆ ಮತ್ತು ಅಖಂಡತೆಯನ್ನು ಬಲಗೊಳಿಸಲು, ಎಲ್ಲರಲ್ಲೂ ಭಾತೃತ್ವ ಭಾವನೆಯನ್ನು ವೃದ್ಧಿಗೊಳಿಸಲು ಈ ಎಲ್ಲಾ ಆಶಯಗಳನ್ನು ಪ್ರತಿಮನೆ-ಮನೆಗಳಿಗೂ, ಮನ-ಮನಗಳಿಗೂ ತಲುಪಿಸುವದು ಈ ಕಾರ್ಯಕ್ರಮದ ಮೂಲ ಧ್ಯೇಯವಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿಒಟ್ಟು 500 ಗ್ರಾಮ ಪಂಚಾಯತಿಗಳು ಹಾಗೂ 38 ನಗರ ಮತ್ತು ಸ್ಥಳೀಯ ಸಂಸ್ಥೆಗಳಿದ್ದು ಪ್ರಸ್ತುತ ದಿನಾಂಕ: 15/02/2023 ರ ವರೆಗೆಒ-ಟ್ಟು386ಗ್ರಾಮ ಪಂಚಾಯತಿ ಮತ್ತು30 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ಥಬ್ದ ಚಿತ್ರದ ಮೆರವಣಿಗೆಯು ಯಶಸ್ವಿಯಾಗಿ ಸಂಚರಿಸಿದೆ.

ಸಂವಿಧಾನ ಜಾಗೃತಿ ಜಾಥದಲ್ಲಿ ಅಧಿಕ ಸಂಖ್ಯೆಯಲ್ಲಿ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಗ್ರಾಮದ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು,ಸ್ವ-ಸಹಾಯ ಸಂಘಗಳು, ಮತ್ತು ಸಾರ್ವಜನಿಕರು ಭಾಗವಹಿಸಿ "ಸಂವಿಧಾನ ಜಾಗೃತಿ ಜಾಥ" ವನ್ನು ಯಶಸ್ವಿಗೊಳಿಸಲು ಕೋರಿದೆ.

# ಮಕ್ಕಳಿಗಾಗಿ ಆಸ್ತಿ ಮಾಡದೇ, ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ: ಮುರುಘರಾಜೇಂದ್ರಶ್ರೀಗಳು

ಘಟಪ್ರಭಾ: ಶಿಕ್ಷಕರು ಮಕ್ಕಳಿಗೆ ಅಕ್ಷರ ಜ್ಞಾನದ ಜೊತೆಗೆ ಉತ್ತಮ ಸಂಸ್ಕಾರವನ್ನು ಕಲಿಸುವ ಮೂಲಕ ಸಮಾಜದ ಸ್ವಾಸ್ಥ್ಯಕ್ಕೆ ಶ್ರಮಿಸಬೇಕು. ಮತ್ತು ಪಾಲಕರು ಮಕ್ಕಳಿಗಾಗಿ ಆಸ್ತಿ ಮಾಡದೇ, ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿರಿ ಎಂದು ಗೋಕಾಕದ ಶೂನ್ಯ ಸಂಪಾದನಮಠದ ಮುರುಘರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ಶುಕ್ರವಾರ ಸಮೀಪದ ಶಿಂದಿಕುರಬೇಟ ಗ್ರಾಮದ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಗಂಡು-ಹೆಣ್ಣು ಮಕ್ಕಳ ಶಾಲೆಯ 7ನೇ ವರ್ಗದ ವಿದ್ಯಾರ್ಥಿ-ವಿದ್ಯಾರ್ಥಿನಿಯರ ಬಿಳ್ಕೊಡುವ ಸಮಾರಂಭ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಗುರುವನ್ನು ಗೌರವಿಸುವಂತಹ ಪರಂಪರೆ ನಮ್ಮ ನೆಲದ ಗುಣ, ಶಿಕ್ಷಣದಿಂದ ಸಮಾಜ ನಿರ್ಮಾಣವಾಗಬೇಕಿದೆ. ಸರಕಾರಿ ಶಾಲೆಯಲ್ಲಿ ಕಲಿತ ಹಲವಾರು ವಿದ್ಯಾರ್ಥಿಗಳು ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ತಾಯಂದಿರು ಮಕ್ಕಳ ಕಡೆ ಗಮನ ಹರಿಸಿ ಅವರಿಗೆ ಒಳ್ಳೆಯ ಜ್ಞಾನ ಹಾಗೂ ಸಂಸ್ಕಾರ ನೀಡುವುದು ಮುಖ್ಯವಾಗಿದೆ. ವಿದ್ಯಾರ್ಥಿಗಳು ತಾವು ಉತ್ತಮ ಶಿಕ್ಷಣ ಪಡೆದು




ತಾವು ಕಲಿತ ಶಾಲೆಗೆ ಮತ್ತು ಗ್ರಾಮಕ್ಕೆ ಕೀರ್ತಿ ತರುವಂತಾಗಲಿ ಎಂದು ಶುಭ ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಮಲ್ಲಾಪೂರ ಪಿಜಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಚಾರ್ಯ ಕೆ.ಎಸ್.ಮಾರಾಪೂರ ಮಾತನಾಡಿ ಶಿಕ್ಷಣದಿಂದ ಮಾತ್ರ ದೇಶದ ಭವಿಷ್ಯ ನಿರ್ಮಾಣ ಸಾಧ್ಯ. ಇಂದಿನ ದಿನಮಾನಗಳಲ್ಲಿ ಪ್ರತಿಯೊಬ್ಬರೂ ಶಿಕ್ಷಣವನ್ನು ಪಡೆದು ಮಕ್ಕಳನ್ನು ಅಕ್ಷರವಂತರನ್ನಾಗಿ ಮಾಡಿದಾಗ ಮಾತ್ರ ದೇಶದ ಹಾಗೂ ಸಮಾಜದ ಪ್ರಗತಿಗೆ ಸಾಧ್ಯವಾಗುತ್ತದೆ. ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ಶಿಕ್ಷಕರ ಪಾತ್ರ ಮಹತ್ವದಾಗಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದರೆ ಸಾಕಷ್ಟು ಅವಕಾಶಗಳು ಸಿಗುತ್ತವೆ. ಪರೀಕ್ಷೆಗಳನ್ನು ಧೈರ್ಯದಿಂದ ಎದುರಿಸಿ ತಂದೆತಾಯಿ, ಗುರುಗಳು ಮೆಚ್ಚುವ ರೀತಿಯಲ್ಲಿ ಫಲಿತಾಂಶ ಪಡೆದು ಪ್ರತಿಭಾನ್ವಿತರಾಗಬೇಕೆಂದು ಹೇಳಿದರು.

ವೇದಿಕೆ ಮೇಲೆ ಬಸವ ಪ್ರಭು ಸ್ವಾಮಿಜಿ, ಗ್ರಾ.ಪಂ ಅಧ್ಯಕ್ಷೆ ಸುಮಿತ್ರಾ ಮಾಯನ್ನವರ, ಉಪಾಧ್ಯಕ್ಷೆ ಸುಜಾತಾ ಲಗಳೇರ, ಗ್ರಾ.ಪಂ ಸದಸ್ಯರಾದ ಭೀಮಶಿ ಬಿರನಾಳಿ, ಮಂಜುನಾಥ ಗುಡಕೇತ್ರ, ಮುಖಂಡರಾದ ಜ್ಯೋತೆಪ್ಪ ಬಂತಿ, ಸಿದ್ಧಾರೂಢ ಕಂಬಾರ, ಶೇಖರ ಮಾನೆ, ಹಾಲಪ್ಪ ಕ-ರಿಗಾರ, ಯಮನಪ್ಪ ಹೊನಕುಪ್ಪಿ, ಎಸ್ಡಿಎಂಸಿ ಅಧ್ಯಕ್ಷರುಗಳಾದ ಶ್ರೀಧರ ಕಂಬಾರ, ದಯಾನಂದ ಕಳಸನ್ನವರ, ಬಸವರಾಜ ಗೋಕಾಕ, ನಿವೃತ್ತ ಪ್ರಾಚಾರ್ಯ ವೈ.ಬಿ. ಹಾದಿಮನಿ, ಶಿಕ್ಷಕರ ಸಂಘದ ಅಧ್ಯಕ್ಷ ಎಲ್.ಎಂ.ಬಡಕಲ್, ಎ.ಪಿ.ಪರಸನ್ನವರ, ಆನಂದ ಹಂಜ್ಯಾಗೋಳ, ಕೆ.ಆರ್.ಅಜ್ಜಪ್ಪನವರ, ಪಿ.ಎಚ್.ಗೋಸಬಾಳ. ಪಿ.ಎಲ್. ಮಲ್ಲಾಪೂರ ಸೇರಿದಂತೆ ಎಸ್.ಡಿ.ಎಂ.ಸಿ ಸದಸ್ಯರು ಹಾಗೂ ಪಾಲಕರು ಉಪಸ್ಥಿತರಿದ್ದು ಶಾಲೆಯ ಪರವಾಗಿ ವೇದಿಕೆ ಮೇಲಿನ ಪೂಜ್ಯರನ್ನು ಹಾಗೂ ಗಣ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಪ್ರಧಾನ ಗುರು ಶ್ರೀಕಾಂತ ಹಂಚಿನಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಬಿ.ಪಾಟೀಲ ಸ್ವಾಗತಿಸಿದರು. ಶಿಕ್ಷಕಿ ಆರ್.ಎಂ.ಹುಣಶ್ಯಾಳಕರ ನಿರೂಪಿಸಿದರು. ಶಿಕ್ಷಕಿ ಜ್ಯೋತಿ ಮೇಟಿ ವಂದಿಸಿದರು. ನಂತ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಂದ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಹಳೇ ವೈಷ್ಯಮ್ಯ: ದುಷ್ಕರ್ಮಿಗಳಿಂದ ಹತ್ಯೆಯಾದ ರೌಡಿ ಶೀಟರ್

ವಿಜಯನಗರ: ಹಳೇ ವೈಷಮ್ಯಕ್ಕೆ ರೌಡಿ ಶೀಟರ್‌ನ್ನು ಬರ್ಬರವಾಗಿ ಹತ್ಯೆ ಮಾಡಿದ ಘಟನೆ ಹಗರಿಬೊಮ್ಮನ ಹಳ್ಳಿಯ ಜೆಸ್ಕಾಂ ಕಚೇರಿಯ ಬಳಿ ನಡೆದಿದೆ. ಬಂಗಾರಿ ಮಂಜುನಾಥ್ (28) ಕೊಲೆಯಾದ ರೌಡಿಶೀಟರ್.



ಹಳೇ ದ್ವೇಷ, ವೈಷಮ್ಯ ಮತ್ತು ಹಣಕಾಸಿನ ವ್ಯವಹಾರ ಹಿನ್ನಲೆಯಲ್ಲಿ ಕೊಲೆ ನಡೆದಿದೆ. ದುಷ್ಕರ್ಮಿಗಳು ಮಂಜುನಾಥ್ ಎದೆಗೆ ಚೂರಿ ಹಾಕಿ ಕೊಲೆ ಮಾಡಿದ್ದಾರೆ. ಕುಟುಂಬಸ್ಥರಿಂದಲೇ ಕೊಲೆಯಾಗಿರೋ ಶಂಕೆ ವ್ಯಕ್ತವಾಗಿದೆ.

ಕೊಲೆ ನಡೆದ ಸ್ಥಳಕ್ಕೆ ವಿಜಯನಗರ ಎಸ್ಪಿ ಶ್ರೀಹರಿಬಾಬು ಬಿಎಲ್ ಭೇಟಿ ನೀಡಿದ್ದಾರೆ. ಕೂಡ್ಲಿಗಿ ಡಿವೈಎಸ್ಪಿ ಮಲ್ಲೇಶಪ್ಪ ಮಲ್ಲಾಪುರ, ಸಿಪಿಐ, ವಿಕಾಸ್, ವೆಂಕಟಸ್ವಾಮಿ ಸೇರಿದಂತೆ ಪೊಲೀಸರು ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದಾರೆ. ಹಗರಿಬೊಮ್ಮನ ಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089